ಸಂಪುಟ 01 | ಸಂಚಿಕೆ 201 | ಬುಧವಾರ 17 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಮೊಸಳೆ ದಿನ
ಅಳಿವಿನಂಚಿನಲ್ಲಿರುವ ಮೊಸಳೆಗಳ ಸಂರಕ್ಷಣೆಗಾಗಿ ಈ ದಿನವನ್ನು ಮೀಸಲಿಡಲಾಗಿದೆ.

2) ಆಹಾರ ಪದ್ಧತಿ ದಿನ : ಅಮೆರಿಕ ಸೇರಿದಂತೆ ಹಲವು ದೇಶಗಳಲ್ಲಿ ಇದನ್ನು 'National Eat Your Veggies Day' (ತರಕಾರಿ ತಿನ್ನುವ ದಿನ) ಎಂದು ಆಚರಿಸಿ ಆರೋಗ್ಯಕರ ಆಹಾರ ಪದ್ಧತಿಗೆ ಒತ್ತು ನೀಡಲಾಗುತ್ತದೆ.

3) ಮರುಭೂಮಿಕರಣ ಮತ್ತು ಬರಗಾಲದ ವಿರುದ್ಧ ಹೋರಾಡಲು ವಿಶ್ವ ದಿನ (ಅಂತರರಾಷ್ಟ್ರೀಯ)
1995 ರಿಂದ, ಮರುಭೂಮಿ?ಕರಣ ಮತ್ತು ಬರಗಾಲದ ಪರಿಣಾಮಗಳನ್ನು ಎದುರಿಸಲು ಅಂತರರಾಷ್ಟ್ರೀಯ ಸಹಕಾರದ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ. 1994 ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಜೂನ್ 17 ಅನ್ನು "ಮರುಭೂಮಿಕರಣ ಮತ್ತು ಬರಗಾಲವನ್ನು ಎದುರಿಸಲು ವಿಶ್ವ ದಿನ" ಎಂದು ಘೋಷಿಸಿತು. ಮರುಭೂಮಿಕರಣವನ್ನು ಪರಿಣಾಮಕಾರಿಯಾಗಿ ನಿಭಾಯಿಸಬಹುದು,

## ಸುಭಾಷಿತ

ಪ್ರತಿಸ್ಪರ್ಧಿಗಳಿಂದ ಆಗುವ ಪರಾಜಯ ನಿಜವಾದ ಸೋಲಲ್ಲ; ನಮ್ಮಲ್ಲಿ, ನಮ್ಮ ಶ್ರದ್ಧೆಯಲ್ಲಿ ನಮಗೆ ನಂಬಿಕೆ ಹೋಗುವುದು ನಿಜವಾದ ಸೋಲು.

-ಗೌತಮ ಬುದ್ಧ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ವಿಧಾನ ಪರಿಷತ್ ಚುನಾವಣೆ :

## ಅಡ್ಡ ಮತದಾನದ ಭೀತಿ, ಕಾಂಗ್ರೆಸ್ ಶಾಸಕರು ರೆಸಾರ್ಟ್‌ಗೆ ಶಿಫ್ಟ್

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ವಿಧಾನ ಸಭೆಯಿಂದ ವಿಧಾನ ಪರಿಷತ್ತಿನ ಏಳು ಸದಸ್ಯರ ಆಯ್ಕೆಗಾಗಿ ನಡೆಯುವ ಚುನಾವಣೆಯಲ್ಲಿ ಅಡ್ಡ ಮತದಾನದ ಭೀತಿಯಿಂದಾಗಿ ಕಾಂಗ್ರೆಸ್ ಪಕ್ಷ ಇಂದಿನಿಂದ ಎರಡು ದಿನಗಳ ಕಾಲ ತಮ್ಮ ಶಾಸಕರಿಗೆ ರೆಸಾರ್ಟ್ ವಾಸ್ತವ್ಯ ಕಡ್ಡಾಯಗೊಳಿಸಿದೆ. ಬಿಡದಿಯ ಈಗಲ್‌ಟನ್ ರೆಸಾರ್ಟ್‌ನಲ್ಲಿ ಶಾಸಕರಿಗಾಗಿ 150 ಕೊಠಡಿಗಳನ್ನು ಕಾಯ್ದಿರಿಸಲಾಗಿದೆ.

ಇಂದು ಸಂಜೆಯೊಳಗೆ ಎಲ್ಲಾ ಶಾಸಕರೂ ಇದೇ ತಿಂಗಳ 18ರ ವರೆಗೂ ವಾಸ್ತವ್ಯಕ್ಕೆ ಅಗತ್ಯವಾದ ಪೂರ್ವ ಸಿದ್ಧತೆಗಳೊಂದಿಗೆ ಆಗಮಿಸುವಂತೆ ಸೂಚನೆ ನೀಡಲಾಗಿದೆ. ಸಂಜೆ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಡಿ.ಕೆ.ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಶಾಸಕಾಂಗ ಸಭೆ ನಡೆಯಲಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್,




ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಆಗಮಿಸುವ ನಿರೀಕ್ಷೆಯಿದೆ. ಕಾಂಗ್ರೆಸ್ ತನ್ನ ಸಂಖ್ಯಾ ಬಲವನ್ನು ಮೀರಿ 5ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಮೊದಲ 4 ಅಭ್ಯರ್ಥಿಗಳಾದ ಬಿ.ಕೆ.ಹರಿಪ್ರಸಾದ್, ತಿಪ್ಪಣ್ಣಪ್ಪ ಕಮಕನೂರು, ಪಿ.ವಿ.ಮೋಹನ್, ಶಿವಣ್ಣ ಮಳವಳ್ಳಿ ಬಿ.ಎಸ್. ಕಣದಲ್ಲಿದ್ದಾರೆ.

ಹೆಚ್ಚುವರಿ 5ನೇ ಅಭ್ಯಥಿಯನ್ನಾಗಿ ಡಿ.ಕೆ.ಶಿವಕುಮಾರ್ ಅವರ ಆಪ್ತ ವಿನಯ್ ಕಾರ್ತಿಕ್ ಅವರನ್ನು ಕಣಕ್ಕಿಳಿಸಲಾಗಿದೆ. ವಿಧಾನ ಪರಿಷತ್ ಚುನಾವಣೆ ಕಾಂಗ್ರೆಸ್ ಪಾಲಿಗೆ ಪ್ರತಿಷ್ಠೆಯ ಕಣವಾಗಿದೆ. ಮುಖ್ಯಮಂತ್ರಿಯಾದ ಬಳಿಕ ಡಿ.ಕೆ.ಶಿವಕುಮಾರ್ ಅವರಿಗೆ ಮೊದಲ ಚುನಾವಣೆಯಾಗಿರುವುದರಿಂದ ಅಗ್ನಿ ಪರೀಕ್ಷೆ ಎಂದೇ ಭಾವಿಸಲಾಗಿದೆ.

ಇ-ಪೇಪರ್ ಜಾಹೀರಾತು ಸ್ಥಳ

ಕಾಂಗ್ರೆಸ್ ತನ್ನ ಬುಟ್ಟಿಯಲ್ಲಿ 134 ಅಧಿಕೃತ ಸದಸ್ಯರನ್ನು ಹೊಂದಿದೆ. ಪಕ್ಷೇತರರು, ಬಿಜೆಪಿಯ ಉಚ್ಚಾಟಿತರು ಹಾಗೂ ಜೆಡಿಎಸ್ ಅಥವಾ ಬಿಜೆಪಿಯ ಭಿನ್ನಮತಿಯ ಶಾಸಕರ ಬೆಂಬಲ ಪಡೆಯಲು ಪ್ರಯತ್ನಿಸಲಾಗುತ್ತಿದೆ. ಮತ್ತೊಂದೆಡೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ತಮ ಪಕ್ಷದ ಶಾಸಕರ ಮತಗಳನ್ನು ಕಾಪಾಡಿಕೊಳ್ಳಲು ಹಾಗೂ ಕಾಂಗ್ರೆಸ್‌ನಲ್ಲಿ ಅಸಮಾಧಾನಿತರನ್ನು ಸೆಳೆದು, ಜೆಡಿಎಸ್ ಅಭ್ಯರ್ಥಿ ಗೋವಿಂದರಾಜ್ ಅವರನ್ನು ಗೆಲ್ಲಿಸಿಕೊಳ್ಳಲು ತೆರೆಮರೆಯಲ್ಲಿ ಪ್ರಯತ್ನಿಸುತ್ತಿದೆ. ಕಾಂಗ್ರೆಸ್ ತನ್ನ ಮೊದಲ ಸಾಲಿನ ನಾಲ್ವರು ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳುವ ಮೂಲಕ ಬಾಕಿ ಉಳಿದ ಮತಗಳ ಜೊತೆಗೆ ಎರಡನೇ ಪ್ರಾಶಸ್ತ್ಯ ಮತಗಳೊಂದಿಗೆ 5ನೇ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳುವ ಪ್ರಯತ್ನ ಮಾಡುತ್ತಿದೆ.

## ಮಲೇರಿಯಾ ವಿರೋಧಿ ಮಾಸಾಚರಣೆ: ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದ ಆರೋಗ್ಯ ಇಲಾಖೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ ರಾಯಚೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಮತ್ತು ಸಂತ ಆಂತೋನಿಯರ ಹಿರಿಯ ಪ್ರಾಥಮಿಕ ಶಾಲೆ ಮತ್ತು ಸರಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಮಲೇರಿಯಾ ಮಾಸಾಚರಣೆ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು

ಕಾರ್ಯಕ್ರಮದ ಕುರಿತು ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಲೇರಿಯಾ ರೋಗದ ಲಕ್ಷಣಗಳು, ಹರಡುವ ವಿಧಾನಗಳು




ಹಾಗೂ ತಡೆಗಟ್ಟುವ ಕ್ರಮಗಳ ಕುರಿತು ಮಾಹಿತಿ ನೀಡಿದರು. ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶಪಡಿಸುವುದು, ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡುವುದು ಮತ್ತು ನೀರು ನಿಲ್ಲದಂತೆ ನೋಡಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಸಲಹೆಗಳನ್ನು ನೀಡಿದರು.

ಮಲೇರಿಯಾ ರೋಗ ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಮನೆ ಪರಿಸರವನ್ನು ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಸೊಳ್ಳೆ ಪರದೆ ಹಾಗೂ ಸೊಳ್ಳೆ ನಿಯಂತ್ರಕಗಳನ್ನು ಬಳಸಬೇಕು ಒಟ್ಟಾರೆ ವಿದ್ಯಾರ್ಥಿಗಳು ಮಲೇರಿಯಾ ನಿರ್ಮೂಲನೆಯಲ್ಲಿ ಕೈಜೋಡಿಸಬೇಕು ಎಂದು ತಿಳಿಸಿದರು.

ನಂತರ ಮಾತನಾಡಿದ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳಾದ ನಿಂಗಮ್ಮ ಅವರು ಶಾಲಾ ವಿದ್ಯಾರ್ಥಿಗಳು ಮಲೇರಿಯಾ ತಡೆಗಟ್ಟುವಲ್ಲಿ ವಿದ್ಯಾರ್ಥಿಗಳು ಸಹಭಾಗಿತ್ವ ಅತ್ಯಗತ್ಯ. ಪ್ರತಿಯೊಬ್ಬರೂ ಸ್ವಚ್ಛತೆಗೆ ಆದ್ಯತೆ ನೀಡಿದರೆ ರೋಗವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಬಹುದು ಎಂದು ಹೇಳಿದರು.


ಈ ಸಂದರ್ಭದಲ್ಲಿ ಸಂತ ಅಂತೋನಿಯರ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಮೇರಿ. ಶಿಕ್ಷಕರಾದ . ರಾಮಣ್ಣ .ಶೈಲಜಾ. ಪ್ರಕಾಶ. ಮೀನಾ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಹನುಮಂತಪ್ಪ ನಾಯಕ ಶಿಕ್ಷಕರಾದ ಯಲ್ಲಪ್ಪ. ಕಾವೇರಿ. ಬಸವರಾಜ. ಪಾರ್ವತಿ .ಶ್ರೀದೇವಿ. ಚನ್ನಬಸಮ್ಮ ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಹೇಶ. ಅಂಬಮ್ಮ. ಆಶಾ ಕಾರ್ಯಕರ್ತರಾದ ಸುಜಾತ. ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಮಕ್ಕಳು ಶಾಲೆಗೆ ಹಾಜರು,ಬಿಸಿಯೂಟ ಪಕ್ಕದ ಶಾಲೆಯಿಂದ ವ್ಯವಸ್ಥೆ: ಚಂದ್ರಶೇಖರ ದೊಡ್ಡಮನಿ ಬಿಇಒ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲ್ಲೂಕಿನ ಹಾಲಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಮ್ ರಾಮಲದಿನ್ನಿ ಶಾಲೆಯಲ್ಲಿ ಅಡುಗೆ ಸಹಾಯಕಿ ಮತ್ತು ಗ್ರಾಮಸ್ಥರ ವೈಯಕ್ತಿಕ ದ್ವೇಷದಿಂದ ಕಳೆದ ಹದಿನೈದು ದಿನಗಳಿಂದ ಮಕ್ಕಳನ್ನು ಶಾಲೆಗೆ ಪಾಲಕರು ಕಳಿಸಿತ್ತಿಲ್ಲ,ಎರಡು ಸಲ ಅಧಿಕಾರಿಗಳು ಸಂಧಾನ ಮಾಡಿದರು ಮಕ್ಕಳನ್ನು ಶಾಲೆಗೆ ಪಾಲಕರು ಕಳಿಸಿರಲಿಲ್ಲ,

ಆದರೆ ಇಂದು ಶಾಲೆಗೆ ಸ್ವತಃ ಮಾನ್ವಿ ಬಿಇಒ ಚಂದ್ರಶೇಖರ ದೊಡ್ಡಮನಿಯವರು ಆಗಮಿಸಿ ಗ್ರಾಮಸ್ಥರು ಮತ್ತು ಅಡುಗೆ ಸಹಾಯಕಿ ಜೊತೆ ಸುದೀರ್ಘವಾಗಿ ಚರ್ಚಿಸಿದರು, ಆದರೆ ಗ್ರಾಮಸ್ಥರು ಎಲ್ಲರೂ ಸೇರಿ ಅಡುಗೆ



ಸಹಾಯಕಿ ನಮ್ಮ ಶಾಲೆಗೆ ಬೇಡವೇ ಬೇಡ ಎಂದು ಒಕ್ಕೊರಲಿನಿಂದ ಹೇಳಿದರು.

ಕೊನೆಗೆ ಅನಿವಾರ್ಯವಾಗಿ ಬಿಇಒ ಚಂದ್ರಶೇಖರ ದೊಡ್ಡಮನಿ ಮಾತನಾಡಿ ಮಕ್ಕಳನ್ನು ಶಾಲೆಗೆ ಕಳಿಸಲು ಪಾಲಕರಿಗೆ ತಿಳಿಸಿ ,ಬಿಸಿಯೂಟವನ್ನು ಹಾಲಾಪೂರ ಪ್ರಾಥಮಿಕ ಶಾಲೆಯಿಂದ ತಾತ್ಕಾಲಿಕ ವ್ಯವಸ್ಥೆ ಮಾಡಲು ಸೂಚಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿಗಳಿಗೆ ಮಾಹಿತಿ ಕೊಟ್ಟು ಸಮಸ್ಯೆ ಬಗೆಹರಿಸಲಾಗುವುದು ಎಂದು ಪಾಟೀಲ್ ನ್ಯೂಜ್ ಜೊತೆ ಮಾತನಾಡಿದರು, ಈ ವೇಳೆಯಲ್ಲಿ ಮುಖ್ಯಗುರುಗಳಾದ ಮಂಜುನಾಥ ಹಾಲಾಪೂರ ನಿಂಗಪ್ಪ ಹಾಲಾಪೂರ ಹಾಗೂ ಗ್ರಾಮಸ್ಥರು ಇದ್ದರು.

## ಸಿರಿಧಾನ್ಯಗಳನ್ನು ಬಳಸಿ,ಆರೋಗ್ಯವೃದ್ದಿಸಿ:ಪ್ರತಾಪಗೌಡ ಪಾಟೀಲ್

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಭಾರತೀಯ ಜನತಾ ಪಕ್ಷದ ಮಹಿಳಾ ಮೋರ್ಚಾ ವತಿಯಿಂದ ಭಾರತದ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಜಿ ಅವರು ಕರೆ ಮೇರಿಗೆ ನಾರಿ ಶಕ್ತಿ ಪೋರಂ ಅಡಿಯಲ್ಲಿ ಆರೋಗ್ಯಕರ ಭಾರತ ಆತ್ಮ ನಿರ್ಭರ ಭಾರತ ಪರಿಸರ ಸ್ನೇಹ ಜೀವನ ಶೈಲಿಗಾಗಿ ಖಾದಿ ಎಣ್ಣೆಯನ್ನು ಬಳಕೆ ಕಡಿಮೆ ಮಾಡಬೇಕೆಂದು ಕರೆ ನೀಡಿದ್ದಾರೆ.

ಇದರ ಕುರಿತು ಜಾಗೃತಿ ಕಾರ್ಯಕ್ರಮವನ್ನು ಮಾಜಿ ಶಾಸಕ ಪ್ರತಾಪ್ ಗೌಡ್ ಪಾಟೀಲ್ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟನೆ ಮಾಡಿ ಮಾತನಾಡಿ ಇಂದು ಆಧುನಿಕ ಆಹಾರ ಶೈಲಿಯಲ್ಲಿ ನಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದು, ಅದಕ್ಕೆ ನಮ್ಮ ಪರೆಂಪರಗತವಾಗಿ ಬಂದಿರುವ ಸಿರಿಧಾನ್ಯಗಳು,ವಿವಿಧ ಬಗೆಯ ಬೇಳೆಕಾಳಗಳು,ಹಸಿಕಾಯಿಪಲ್ಯ,ಪೌಷ್ಟಿಕಾಂಶಗಳನ್ನು ಬಳಸಬೇಕು,ಆದಷ್ಟು ಎಣ್ಣಿ ಅಂಶ ಅಡುಗೆ



ಪ್ರಮಾಣ ಕಡಿಮೆಮಾಡಿ ಆರೋಗ್ಯಯುಕ್ತ ಆಹಾರ ಬಳಸಬೇಕು ಎಂದು ಹೇಳಿದರು. ಸಂದರ್ಭದಲ್ಲಿ ಮಸ್ಕಿ ಮಹಿಳಾ ಮೋರ್ಚಾದ ಅಧ್ಯಕ್ಷರಾದ ನಿವೇದಿತಾ ಬಳ್ಳಾ ಮಂಡಲದ ಅಧ್ಯಕ್ಷರಾದ ಶರಣಬಸವ ಸೊಪ್ಪಿಮಠ ಕಾರ್ಯಕ್ರಮ ಕುರಿತು ಮಾತನಾಡಿದರು.

ಈ ವೇಳೆಯಲ್ಲಿ ಮಹಿಳಾ ಮೋರ್ಚಾ ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಶ್ರೀಮತಿ ರಾಜೇಶ್ವರಿ , ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾದ ಡಾಕ್ಟರ್ ಶೋಭಾ ದಿವಟರ್ ಹಾಗೂ ರಾಜೇಶ್ವರಿ ದಿವಟರ್ ಕಾರ್ಯಕ್ರಮ ಕುರಿತು ಸಂಪೂರ್ಣ ಮಾಹಿತಿಯನ್ನು ಜೀವನಶೈಲಿ ಹಾಗೂ ಆಹಾರ ಪದ್ಧತಿ ಮತ್ತು ಖಾತೆ ಎಣ್ಣೆಗಳಿಂದ ಆಗುವ ಹಾನಿಕಾರಗಳ ಕುರಿತು ಸಂಪೂರ್ಣ ಮಾಹಿತಿಯನ್ನು ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ತಿಳಿಸಿದರು.

## ಕೃತಕ ಗೊಬ್ಬರ ಅಭಾವ ಕಳಪೆ ಬೀಜ ಹಾಗೂ ಸರ್ಕಾರದ ಆದೇಶ ಉಲ್ಲಂಘಿಸುತ್ತಿರುವ ಗೊಬ್ಬರ ಅಂಗಡಿಗಳ ವಿರುದ್ಧ ಸೂಕ್ತ ಕ್ರಮಕ್ಕೆ ಜ ಕ ರಕ್ಷಣಾ ಸೇನೆ ಒತ್ತಾಯ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಪಟ್ಟಣವು ಸೇರಿದಂತೆ ತಾಲೂಕಿನಾದ್ಯಂತ ರಸಗೊಬ್ಬರ ಮಾರಾಟಗಾರರು ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿ ಸರ್ಕಾರ ನಿಗದಿಪಡಿಸಿರುವ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ರೈತರನ್ನು ವಂಚಿಸುತ್ತಿದ್ದಾರೆ.

ಅಲ್ಲದೇ ರೈತರಿಗೆ ರಸಗೊಬ್ಬರಗಳ ಜೊತೆ ಕಡ್ಡಾಯವಾಗಿ ಇತರೆ ಉತ್ಪನ್ನಗಳನ್ನು ಖರೀದಿಸುವಂತೆ ತಾಕೀತು ಮಾಡಿ,ಕಳಪೆ ಗುಣಮಟ್ಟದ ಬೀಜಗಳನ್ನು ಮಾರಾಟ ಮಾಡುತ್ತಿರುವ ಗೊಬ್ಬರ ಅಂಗಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಜಯ ಕರ್ನಾಟಕ ರಕ್ಷಣಾ ಸೇನೆಯ ತಾಲೂಕ ಅಧ್ಯಕ್ಷ ಹನುಮಂತ ನಾಯಕ್ ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು.




ಪ್ರಸ್ತುತ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಆರಂಭವಾಗಿರುವ ಸಂದರ್ಭದಲ್ಲಿ ರೈತರು ಗೊಬ್ಬರ ಮತ್ತು ಬೀಜಗಳಿಗಾಗಿ ಖಾಸಗಿ ರಸಗೊಬ್ಬರ ಅಂಗಡಿಗಳನ್ನು ಅವಲಂಬಿಸಿದ್ದಾರೆ. ಪರಿಸ್ಥಿತಿಯನ್ನು ದುರುಪಯೋಗ ಪಡಿಸಿಕೊಂಡುಕೆಲ ವ್ಯಾಪಾರಿಗಳು ಅಕ್ರಮ ಲಾಭ ಗಳಿಸುತ್ತಿದ್ದು, ಇದರಿಂದ ರೈತರಿಗೆ ಆರ್ಥಿಕ ನಷ್ಟವಾಗುವುದರ ಜೊತೆಗೆ ಕಳಪೆ ಬೀಜದಿಂದ ಗುರುಗುಂಟ , ಆನೆಹೊಸೂರು ಭಾಗದಲ್ಲಿ ಬೀತನೆ ಮಾಡಿದ ಬೀಜಗಳು ಮೊಳಕೆಯೊಡೆದಿಲ್ಲ ಇದರಿಂದಾಗಿ ರೈತರು ಕಂಗಾಲಾಗಿದ್ದಾರೆ.

ಅಲ್ಲದೇ ಬೀತನೆ ಬೀಜ ಹಾಗೂ ರಸಗೊಬ್ಬರ ಮಾರಾಟಕ್ಕೆ ಬಿಲ್ ನೀಡದೇ ಬಿಳಿ ಚೀಟಿ ವ್ಯವಹಾರ ಮಾಡಿ ರೈತರಿಗೆ ಹಾಗೂ ಸರ್ಕಾರಕ್ಕೆ ವಂಚನೆ ಮಾಡುತ್ತಿದ್ದಾರೆ. ಸರ್ಕಾರದ ಮಾರ್ಗಸೂಚಿ ಹಾಗೂ ನಿಗದಿತ ದರಗಳನ್ನು ಉಲ್ಲಂಘಿಸಿ ದುಪಟ್ಟು ದರಕ್ಕೆ ಗೊಬ್ಬರ ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಕೃಷಿ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳ ವಿಶೇಷ ತಂಡವನ್ನು ರಚಿಸಿ ದಾಳಿ ನಡೆಸಿ ಪರಿಶೀಲಿಸಬೇಕು.

ರೈತರ ಹಿತದೃಷ್ಟಿಯಿಂದ ಕೂಡಲೇ ಆಕ್ರಮವಾಗಿ ರಸಗೊಬ್ಬರಗಳನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಹಾಗೂ ಕಳಪೆ ಬಿತ್ತನೆ ಬೀಜಗಳನ್ನು ಮಾರಾಟ ಮಾಡುತ್ತಿರುವ ಅಂಗಡಿಗಳ ಪರವಾನಗಿಯನ್ನು (ಲೈಸೆನ್ಸ್) ರದ್ದುಪಡಿಸಿ ಕಠಿಣ ಶಿಕ್ಷೆ ವಿಧಿಸಬೇಕು.

ಒಂದು ವೇಳೆ ನಮ್ಮ ಮನವಿಗೆ ಸ್ಪಧಿಸದೇ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ, ರೈತರೊಂದಿಗೆ ಸಹಾಯಕ ಆಯುಕ್ತರ ಕಚೇರಿ ಮುಂದೆ ಪ್ರತಿಭಟನೆಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಚ್ಚರಿಸಿದರು . ಈ ಸಂದರ್ಭದಲ್ಲಿ ನಿಂಗಪ್ಪ ರಾಮಲೂಟ ಪ್ರಧಾನ ಕಾರ್ಯದರ್ಶಿ , ಪ್ರಕಾಶ್ ಕುರಿ , ದುರುಗಪ್ಪ , ಅಮರೇಗೌಡ , ಹನುಮಂತ , ಮಲ್ಲೇಶ , ಪ್ರವೀಣ್ ಕುಮಾರ್ , ಮಲ್ಲೇಶ್ ನಾಯಕ , ಮೋಹಿನುದ್ದಿನ್ , ಆದಪ್ಪ ನಾಯಕ್ , ಶೇಷವಲ್ಲಿ , ಶಿವು ಆದಪ್ಪ ನಾಯಕ್ ,ರಾಮಪ್ಪ ನಾಯಕ್ , ಎಸ್ ಕುಮಾರ್ , ಅಮರೇಶ್ , ಅರುಣ್ ಕುಮಾರ್ , ವೆಂಕಟೇಶ್ ಸೇರಿದಂತೆ ಇತರರು ಇದ್ದರು .

## ಸಾಹಿತ್ಯ ಸಿಂಚನ

ಕಾಯುತ್ತಿರುವೆ ಮಳೆರಾಯ
ಬಾಯಾರಿದ ಭೂಮಿತಾಯಿ

ಆಕಾಶ ನೋಡಿ ಕಣ್ಣು ನೋಯ್ತು
ಮೋಡ ಕಂಡು ಮನ ಸೊಲ್ತು
ಬಿರುಕು ಬಿಟ್ಟಿದೆ ಹೊಲದ ಎದೆ
ಕೆರೆಯ ನೀರು ಖಾಲಿ ಖಾಲಿ

ಬೀಜ ಬಿತ್ತಿ ತಿಂಗಳಾಯ್ತು
ಮೊಳಕೆ ಒಡೆಯದೆ ಮಣ್ಣಲ್ಲೇ ನಿಂತೈತೆ
ರೈತನ ಕಣ್ಣಲ್ಲಿ ಚಿಂತೆ ಕಟ್ಟೈತೆ
ಎಳೆ ಮಗು ಹಾಲಿಗೆ ಅಳೋದ್ ಕೇಳೈತೆ

ಬಾ ಮಳೆರಾಯ, ಬಾರೋ ಬೇಗ
ನಿನ್ನ ಹನಿಗೆ ಜೀವವಿದೆ
ಒಣಗಿದ ಕೆರೆ ತುಂಬಿ ಹರಿದು
ಹಸಿರು ಹಾಸು ಈ ನೆಲದ ಮೇಲೆ

ಗುಡುಗು ಸಿಡಿಲಿನ ಜೊತೆಯಾಗಿ
ಬಾರೋ ನನ್ನ ಮುದ್ದು ಮಳೆರಾಯ
ನಿನ್ನ ಕಾಯ್ತಿದೆ ಈ ಊರು
ನಿನ್ನ ನಂಬಿದೆ ಈ ಭೂತಾಯಿ

ಕಾಯುತ್ತಿರುವೆ ಮಳೆರಾಯ
ಕಣ್ಣೀರಲ್ಲೇ ಕಾದಿರುವೆ
ಒಂದು ಹನಿ ಬಿದ್ದರೆ ಸಾಕು
ಕೋಟಿ ಜೀವ ಉಳಿಯುತ್ತೆ

– ಎಸ್.ದುರಗಪ್ಪ.ಕುಷ್ಟಗಿ.

# ಜಾಲಹಳ್ಳಿಯ ಜನತಾ ಕಾಲೋನಿ ಸರ್ಕಾರಿ ಶಾಲೆಯಲ್ಲಿ ಶಿಕ್ಷಕರ ಕೊರತೆ
# ಕಾಯಂ ಶಿಕ್ಷಕರ ನೇಮಕಾತಿಗೆ ಎಸ್‌ಡಿಎಂಸಿ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಜನತಾ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೀವ್ರ ತೊಂದರೆಯಾಗುತ್ತಿದ್ದು, ತಕ್ಷಣವೇ ಕಾಯಂ ಶಿಕ್ಷಕರನ್ನು ನಿಯೋಜಿಸುವಂತೆ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಹಾಗೂ ಪೋಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.**

ಈ ಕುರಿತು ಮಾತನಾಡಿದ ಎಸ್‌ಡಿ–ಎಂಸಿ ಅಧ್ಯಕ್ಷ ಖುರ್ಷಿದ್ ಪಟೇಲ್, ಶಾಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರೂ ಅಗತ್ಯ ಪ್ರಮಾಣದ ಕಾಯಂ ಶಿಕ್ಷಕರ ಕೊರತೆಯಿಂದ ಗುಣಮಟ್ಟದ ಶಿಕ್ಷಣ ನೀಡುವುದು ಕಷ್ಟಕರವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

"ಶಿಕ್ಷಕರ ಕೊರತೆಯಿಂದ ಮಕ್ಕಳ ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿದೆ. ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಹಾಗೂ ಶಾಲೆಯ ಸುಗಮ ನಿರ್ವಹಣೆಗೆ ಕೂಡಲೇ ಕಾಯಂ ಶಿಕ್ಷಕರನ್ನು ನೇಮಿಸಬೇಕು" ಎಂದು ಎಸ್‌ಡಿ–ಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ವಿನಂತಿಸಿದ್ದಾರೆ.



ಈ ಸಂದರ್ಭದಲ್ಲಿ ಮಾತನಾಡಿದ ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಸದಸ್ಯ ಭೀಮಣ್ಣ ವಿರಗೋಟ್, ಮಕ್ಕಳ ಶಿಕ್ಷಣದ ಹಿತದೃಷ್ಟಿಯಿಂದ ಶಿಕ್ಷಣ ಇಲಾಖೆ ತುರ್ತು ಕ್ರಮ ಕೈಗೊಂಡು ಶೀಘ್ರದಲ್ಲೇ ಕಾಯಂ ಶಿಕ್ಷಕರನ್ನು ನಿಯೋಜಿಸಬೇಕು ಎಂದು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಜಾಲಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರಾದ ಈಶಣ್ಣ ಕಾಟಮಳ್ಳಿ ಮಾತನಾಡಿ, ಜನತಾ ಕಾಲೋನಿ ಶಾಲೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಸರಿಯಾದ ವಿದ್ಯುತ್ ಸಂಪರ್ಕ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದ–ರಿಂದ ಕೂಡಲೇ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಮುದುರಂಗಪ್ಪ ವಠಾರ ಮಾತನಾಡಿ, ಶಾಲೆಯ ಮುಂಭಾಗದಲ್ಲೇ ಜಿಲ್ಲಾ ಮುಖ್ಯ ರಸ್ತೆ ಇರುವುದರಿಂದ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಅಪಘಾತಗಳ ಸಾಧ್ಯತೆ ಹೆಚ್ಚಿದೆ. ಆದ್ದರಿಂದ ಶಾಲೆಯ ಎದುರು ರಸ್ತೆ ಮೇಲೆ ವೇಗ ನಿಯಂತ್ರಕ (ರೋಡ್ ಬ್ರೇಕರ್) ಅಳವಡಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಖುರ್ಷಿದ್ ಪಟೇಲ್, ಸದಸ್ಯ ಹುಸೇನಪ್ಪ ತವಗ, ಪಾಲಕರ ಪ್ರತಿನಿಧಿ ಶಿವಪ್ಪ ಅಂಜಲ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಸದಸ್ಯ ಭೀಮಣ್ಣ ವಿರಗೋಟ್, ಮುದರಂಗಪ್ಪ ವಠಾರ, ಈಶಣ್ಣ ಕಾಡುಮಳ್ಳಿ, ಶಿವಲಿಂಗಪ್ಪ ಗೆಜ್ಜೆಭಾವಿ, ಎಂ.ಡಿ. ಆಸೀಫ್ ಜಿಲಾನಿ ಖಾಜಿ (ದೇವದುರ್ಗ), ಪತ್ರಕರ್ತ ವಲಿ ಕುರೇಶಿ, ಕಾಸಿಂಸಾಬ್ ನಗರಗುಂದ, ಬಾಬುಸಾಬ್ ಗೌರಂಪೇಟ ಸೇ–ರಿದಂತೆ ಶಾಲೆಯ ಮಕ್ಕಳ ಪಾಲಕರು ಹಾಗೂ ಗ್ರಾಮದ ಸಾರ್ವಜನಿಕರು ಉಪಸ್ಥಿತರಿದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

# ರೈತರ ಹಕ್ಕುಗಳಿಗೆ ಕೆಪಿಆರ್‌ಎಸ್ ಬೃಹತ್ ಧರಣಿ ಸತ್ಯಾಗ್ರಹ




❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ರೈತರಿಗೆ ಗುಣಮಟ್ಟದ ಬೀಜ–ರಸಗೊಬ್ಬರಗಳ ಸಮರ್ಪಕ ಪೂರೈಕೆ, ಮುಂಗಾರು ಜೋಳದ ಬಾಕಿ ಹಣ ಬಿಡುಗಡೆ, ನಿವೇಶನ ರಹಿತ ಬಡ ಕುಟುಂಬಗಳಿಗೆ ಹಕ್ಕುಪತ್ರ ಹಾಗೂ ಮನೆ ನಿವೇಶನ ವಿತರಣೆ ಸೇರಿದಂತೆ ವಿವಿಧ ಜನಪರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್‌ಎಸ್) ರಾಯಚೂರು ಜಿಲ್ಲಾ ಸಮಿತಿ ವತಿಯಿಂದ ಮಂಗಳವಾರ ಬೃಹತ್ ಧರಣಿ ಸತ್ಯಾಗ್ರಹ ನಡೆಸಲಾಯಿತು.**

ಜಿಲ್ಲಾಧಿಕಾರಿ ನಿವಾಸದ ಬಳಿಯಿಂದ ಆರಂಭವಾದ ಪ್ರತಿಭಟನಾ ರ್ಯಾಲಿಯಲ್ಲಿ ನೂರಾರು ರೈತರು, ಮಹಿಳಾ ರೈತರು ಹಾಗೂ ಸಂಘದ ಕಾರ್ಯಕರ್ತರು ಭಾಗವಹಿಸಿ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿ ಟಿಪ್ಪು ಸುಲ್ತಾನ್ ಗಾರ್ಡನ್‌ವರೆಗೆ ತೆರಳಿದರು. ಪ್ರತಿಭಟನಾಕಾರರು ಸರ್ಕಾರ ಹಾಗೂ ಜಿಲ್ಲಾಡಳಿತದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಸಂಘದ ಮುಖಂಡರು, ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳು ಲಭ್ಯವಾಗುತ್ತಿಲ್ಲ. ಕೆಲವು ವ್ಯಾಪಾರಿಗಳು ಕೃತಕ ಅಭಾವ ಸೃಷ್ಟಿಸಿ ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ. ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಂಡು ರೈತರಿಗೆ ಎಂಆರ್‌ಪಿ ದರದಲ್ಲೇ ಬೀಜ ಮತ್ತು ರಸಗೊಬ್ಬರಗಳು ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ಸರ್ಕಾರ ಎಂಎಸ್‌ಪಿ ದರದಲ್ಲಿ ಖರೀದಿಸಿರುವ ಮುಂಗಾರು ಜೋಳದ ಬಾಕಿ ಹಣವನ್ನು ರೈತರ ಖಾತೆಗೆ ತಕ್ಷಣ ಜಮಾ ಮಾಡಬೇಕು. ಜೆಸ್ಕಾಂ ಮೂಲಕವೇ ವಿದ್ಯುತ್ ವಿತರಣೆಯನ್ನು ಮುಂದುವರಿಸಬೇಕು ಹಾಗೂ ವಿದ್ಯುತ್ ಖಾಸಗೀಕರಣದ ಯಾವುದೇ ಪ್ರಸ್ತಾಪವನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು.

ದೇವದುರ್ಗ, ಸಿಂಧನೂರು, ಮಸ್ಕಿ ಹಾಗೂ ಲಿಂಗಸೂಗೂರು ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಹಲವು ವರ್ಷಗಳಿಂದ ವಾಸಿಸುತ್ತಿರುವ ನಿವೇಶನ ರಹಿತ ಬಡ ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ ಮಾಡಬೇಕು. ಆಶ್ರಯ ಯೋಜನೆಯಡಿ ಮನೆ ಹಾಗೂ ನಿವೇಶನ ಮಂಜೂರು ಮಾಡುವುದರ ಜೊತೆಗೆ ಕುಡಿಯುವ ನೀರು, ರಸ್ತೆ, ಚರಂಡಿ ಮತ್ತು ಬೀದಿ ದೀಪ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು. ಕಾರ್ಮಿಕರಿಗೆ ದೂರದ ಪ್ರದೇಶಗಳಲ್ಲಿ ಕೆಲಸ ನೀಡುವುದನ್ನು ನಿಲ್ಲಿಸಿ ಪೂರ್ಣ ಪ್ರಮಾಣದ ಕೂಲಿ ಪಾವತಿಸಬೇಕು. ಬಿಸಿಲಿನ ತಾಪದಿಂದ ಮೃತಪಟ್ಟ ಕಾರ್ಮಿಕರ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಪ್ರತಿಭಟನೆಯ ನೇತೃತ್ವವನ್ನು ಕೆಪಿಆರ್‌ಎಸ್ ಜಿಲ್ಲಾ ಅಧ್ಯಕ್ಷ ಬಸವಂತ್ರಾಯಗೌಡ ಹಾಗೂ ಜಿಲ್ಲಾ ಕಾರ್ಯದರ್ಶಿ ನರಸಣ್ಣ ನಾಯಕ ವಹಿಸಿದ್ದರು. ಬೇಡಿಕೆಗಳನ್ನು ಶೀಘ್ರ ಈಡೇರಿಸದಿದ್ದಲ್ಲಿ ಜಿಲ್ಲಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಮುಖಂಡರು ಎಚ್ಚರಿಕೆ ನೀಡಿದರು.

ಧರಣಿಯಲ್ಲಿ ಯಾದಗಿರಿ ಜಿಲ್ಲಾ ಅಧ್ಯಕ್ಷ ಚೆನ್ನಪ್ಪ ಆನೆಗುಂದಿ, ಚಂದ್ರಪ್ಪ ಹೊಸ್ಕೇರಾ, ಕ–ರಿಯಪ್ಪ ಅಚ್ಚೊಳಿ, ಡಿ. ವೀರನಗೌಡ ಮಾನ್ವಿ, ಕೆ.ಜಿ. ವೀರೇಶ, ಶರಣಬಸವ, ಎಚ್. ಪದ್ಮ, ಶಕುಂತಲಾ ದೇಸಾಯಿ, ಮೌನೇಶ ಜಾಲಹಳ್ಳಿ, ಶಬ್ಬೀರ್ ಜಾಲಹಳ್ಳಿ, ಎಸ್‌ಎಫ್‌ಐ ಜಿಲ್ಲಾ ಉಪಾಧ್ಯಕ್ಷ ಮಹಾಲಿಂಗ ದೊಡ್ಡಮನಿ, ನಿಂಗಪ್ಪ ವಿರಾಪೂರ, ವಿರುಪಾಕ್ಷಪ್ಪಗೌಡ ಕಲ್ಲೂರು, ಹನುಮಂತ ಮಂಡಲಗುಡ್ಡ, ರಾಮನಗೌಡ ಗಣೇಕಲ್, ದುರುಗಪ್ಪ ಮಸ್ಕಿ, ಪಂಚಲಯ್ಯ ಹಟ್ಟಿ, ಹನುಮಂತ ಬಲದಂಡೆ ಮಸ್ಕಿ, ಮಾಹಾಂತೇಶ ಹಟ್ಟಿ, ಆಂಜಿನೈಯ್ಯ ನಾಗಲಾಪೂರ, ಸಂತೋಷ ತ್ಯಾಪ್ಲಿ, ಬಾಷಾ, ರಂಗನಾಥ ಬುಂಕಲದೊಡ್ಡಿ ಸೇರಿದಂತೆ ನೂರಾರು ರೈತರು ಹಾಗೂ ಮಹಿಳಾ ರೈತರು ಭಾಗವಹಿಸಿದ್ದರು.

## ಬಸ್ ವ್ಯವಸ್ಥೆಯಿಲ್ಲದೆ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ಸಾರಿಗೆ ಇಲಾಖೆ ತಣ್ಣೀರು

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪಟ್ಟಣದಿಂದ ದಿನಾಲೂ ಲಿಂಗಸುಗೂರು,ಸಿಂಧನೂರು ಪಟ್ಟಣದ ವಿವಿಧ ಕಾಲೇಜುಗಳಿಗೆ ವಿದ್ಯಾಭ್ಯಾಸಕ್ಕಾಗಿ ತೆರಳುವ ನೂರಾರು ವಿದ್ಯಾರ್ಥಿಗಳು ಪ್ರತಿದಿನ ಸಮರ್ಪಕ ಬಸ್ ವ್ಯವಸ್ಥೆ ಇಲ್ಲದೆ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸಾರಿಗೆ ಸಂಸ್ಥೆಯ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡಲಾಗುತ್ತಿದೆ ಎಂಬ ಆಕ್ರೋಶ ಸಾರ್ವಜನಿಕ.**



ಈ ಕುರಿತು ಪ್ರತಿಭಟನಾ ಸ್ವರೂಪದಲ್ಲಿ ಆಕ್ರೋಶ ಹೊರಹಾಕಿರುವ ವಿದ್ಯಾರ್ಥಿಗಳು, "ನಾವು ನಿಯಮಿತವಾಗಿ ಹಣ ನೀಡಿ ಬಸ್ ಪಾಸ್ ಪಡೆದಿದ್ದರೂ ನಮಗೆ ಸರಿಯಾದ ಸೇವೆ ಸಿಗುತ್ತಿಲ್ಲ. ಸಾರಿಗೆ ಅಧಿಕಾರಿಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ತಕ್ಷಣವೇ ಕಾಲೇಜು ಸಮಯಕ್ಕೆ ಅನುಗುಣವಾಗಿ ಹೆಚ್ಚುವರಿ ಬಸ್‌ಗಳನ್ನು ಓಡಿಸಬೇಕು" ಎಂದು ಒತ್ತಾಯಿಸಿದ್ದಾರೆ.

ಮಸ್ಕಿ–ಲಿಂಗಸುಗೂರು ಮಾರ್ಗದಲ್ಲಿ ತಕ್ಷಣವೇ ಪ್ರತ್ಯೇಕ "ವಿದ್ಯಾರ್ಥಿ ವಿಶೇಷ ಬಸ್" ವ್ಯವಸ್ಥೆಯನ್ನು ಆರಂಭಿಸಬೇಕಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಕೂಡಲೇ ಗಮನಹರಿಸಿ ವಿದ್ಯಾರ್ಥಿಗಳ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜೀವನವಶ್ಯ ವಸ್ತುಗಳ ಬೆಲೆ ಇಳಿಕೆಗೆ ಒತ್ತಾಯಿಸಿ ರಾಷ್ಟ್ರಪತಿಗಳಿಗೆ ಮನವಿ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕ್ರಾಂತಿಕಾರಿ ಯುವಜನ ಸಂಘಟನೆ ತಾಲೂಕ ಸಮಿತಿ ವತಿಯಿಂದ ರಾಷ್ಟ್ರಪತಿಗಳಿಗೆ ಗ್ರೇಡ್–2 ತಹಶೀಲ್ದಾರ್ ಅಬ್ದುಲ್ ವಾಹಿದ್ ರವರ ಮೂಲಕ ಮನವಿ ಸಲ್ಲಿಸಿ ಸಿ.ಪಿ.ಐ ಎಂ.ಎಲ್.**

ಲಿಬರೇಶನ್ ಪಕ್ಷದ ಜಿಲ್ಲಾ ಮುಖಂಡರಾದ ಅಜೀಜ್ ಜಾಗೀರ್ದಾರ್ ಮಾತನಾಡಿ ಕೇಂದ್ರ ಸರಕಾರವು ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ ಇಳಿಕೆಯಾಗಿದ್ದರೂ ಕೂಡ ಜನಸಾಮಾನ್ಯರಿಗೆ ಅಗತ್ಯವಾದ ಪೆಟ್ರೋಲ್, ಡೀಸೆಲ್ ಹಾಗೂ ಎಲ್‌ಪಿಜಿ ಗ್ಯಾಸ್ ಸಿಲೇಂಡರ್ ಬೆಲೆಗಳನ್ನು ನಿರಂತರವಾಗಿ ಹೆಚ್ಚಿಸುತ್ತಿರುವುದ–




ರಿಂದ ಜನಸಾಮಾನ್ಯರು,ಮಧ್ಯಮ ವರ್ಗದ ಕುಟುಂಬಗಳು ನಿತ್ಯ ಬಳಸುವ ಆಹಾರ ಪದಾರ್ಥಗಳು, ದಿನಸಿ ವಸ್ತುಗಳು, ಕೃಷಿ ಪರಿಕರಗಳು, ಸಾರಿಗೆ ವೆಚ್ಚ ಸೇರಿದಂತೆ ಎಲ್ಲ ಅಗತ್ಯ ವಸ್ತುಗಳ ಬೆಲೆಗಳು ಹೆಚ್ಚಳವಾಗಿವೆ ಇದ್ದರಿಂದ ಜನರು ಜೀವನ ನಡೆಸುವುದು ಕಷ್ಟವಾಗಿದೆ. ರೈತರಿಗೆ ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರ ದೊರೆಯುತ್ತಿಲ್ಲ.

ಉಜ್ವಲ ಯೋಜನೆಯ ಗ್ಯಾಸ್ ಸಿಲೆಂಡರ್‌ಗಳನ್ನು ಕಡಿತ ಮಾಡಲಾಗುತ್ತಿದೆ. ಕೇಂದ್ರ ಸರಕಾರದ ಜನವಿರೋಧಿ ನೀತಿಗಳನ್ನು ವಿರೋಧಿಸಿ ಮುಂದಿನ ದಿನಗಳಲ್ಲಿ ತೀವ್ರವಾದ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಕ್ರಾಂತಿಕಾರಿ ಯುವಜನ ಸಂಘಟನೆ ತಾಲೂಕ ಸಮಿತಿ ಸಂಚಾಲಕರಾದ ರಾಜ ಸಾಬ್, ಜಲಾಲ್ ಪಾಶ, ಬಸಲಿಂಗಪ್ಪ, ರಂಗಪ್ಪ, ಉಡುಪಿ ಕೃಷ್ಣ, ಇಮ್ರಾನ್, ಸೈಯದ್ ಗೌಸ್, ರಮೇಶ್, ಚಂದ್ರಶೇಖರ್, ರಾಮಣ್ಣ, ನಾಗರಾಜ್, ಶಿವಣ್ಣ, ಆದಯ್ಯ, ಬೊಮ್ಮಯ್ಯಪ್ಪ ನಾಯಕ್, ಚಂದ್ರಶೇಖರ್ ಸೇರಿದಂತೆ ಇನ್ನಿತರರು ಇದ್ದರು.

# ಪ್ರಧಾನಮಂತ್ರಿ ವಿಕಸಿತ ಭಾರತ ಯೋಜನೆ ಉದ್ಯೋಗವನ್ನು ಹೆಚ್ಚಿಸುವ ಗುರಿ ಹೊಂದಿದೆ: ನಿರಾಜ್ ಕುಮಾರ್

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 16 (ಕರ್ನಾಟಕ ವಾರ್ತೆ): 2025ರ ಆಗಸ್ಟ್ 15ರಂದು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಾರಂಭಿಸಿದ ಪ್ರಧಾನಮಂತ್ರಿ ವಿಕಸಿತ ಭಾರತ ಉದ್ಯೋಗ ಯೋಜನೆಯು ಭಾರತದಲ್ಲಿ ಖಾಸಗಿ ವಲಯದಲ್ಲಿ ಮೊದಲ ಬಾರಿಗೆ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಉದ್ಯೋಗ ಸೃಷ್ಟಿ ಯೋಜನೆಯಾಗಿದೆ ಎಂದು ರಾಯಚೂರಿನ ಪ್ರಾದೇಶಿಕ ಸಹಾಯಕ ಭವಿಷ್ಯ ನಿಧಿ ಆಯುಕ್ತರಾದ ನಿರಾಜ್ ಕುಮಾರ್ ಅವರು ಹೇಳಿದರು.**

ಜೂನ್ 16ರ ಮಂಗಳವಾರ ದಂದು ನಗರದ ಇಪಿಎಫ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಯೋಜನಯಡಿ 1 ಲಕ್ಷ ಕೋಟಿ ರೂ. ವೆಚ್ಚದೊಂದಿಗೆ ಈ ಯೋಜನೆಯು 2025ರ ಆಗಸ್ಟ್ 1ರಿಂದ 2027ರ ಜುಲೈ 31ರ ಅವಧಿಯಲ್ಲಿ 3.5 ಕೋಟಿ ಉದ್ಯೋಗಗಳನ್ನು ಸೃಷ್ಟಿಸುವ ಗು–ರಿಯನ್ನು ಹೊಂದಿದೆ. ಈ ಯೋಜನೆಯು ಎರಡು ವಿಭಾಗಗಳನ್ನು ಒಳಗೊಂಡಿದ್ದು,




ಭಾಗ–ಎ ಮೊದಲ ಬಾರಿಗೆ ಕೆಲಸ ಮಾಡುವವರ ಮೇಲೆ ಗಮನ ಕೇಂದ್ರೀಕರಿಸಿದರೆ ಭಾಗ–ಬಿ ಉದ್ಯೋಗದಾತರು ಅಥವಾ ನಿಯೋಜಕರ ಮೇಲೆ ಗಮನ ಕೇಂದ್ರೀಕರಿಸಲಾಗಿದೆ ಎಂದರು. ಈ ಮುನ್ನ ಈ ಯೋಜನೆಗೆ ಉದ್ಯೋಗ ಸಂಬಂಧಿತ ಪ್ರೋತ್ಸಾಹಕ ಯೋಜನೆ ಎಂದು ಹೆಸರಿಸಲಾಗಿತ್ತು. 2025ರ ಆಗಸ್ಟ್ 1 ರಂದು ಯೋಜನೆಯ ಹೆಸರನ್ನು ವಿಕಸಿತ ಭಾರತ ಉದ್ಯೋಗ ಯೋಜನೆ ಎಂಬ ಹೆಸರನ್ನು ನೀಡಲಾಗಿದ್ದು, ಆ.15ರ ಸ್ವಾತಂತ್ರ?ಯ ದಿನಾಚರಣೆಯ ಭಾಷಣದ ವೇಲೆ ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕೃತವಾಗಿ ಈ ಯೋಜನೆಯನ್ನು ಘೋಷಿಸಿದರು ಎಂದರು.

ಯೋಜನೆಯಡಿಯಲ್ಲಿ ಖಾಸಗಿ ವಲಯದಲ್ಲಿ ತಮ್ಮ ಮೊದಲ ಉದ್ಯೋಗವನ್ನು ಪಡೆಯುವ ಯುವ ಉದ್ಯೋಗಿಳು 15,000 ರೂಪಾಯಿಗಳ ಪ್ರೋತ್ಸಾಹವನ್ನು ಪಡೆಯುತ್ತಾರೆ. ಅದನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗುತ್ತದೆ. ಈ ಪ್ರೋತ್ಸಾಹಕವನ್ನು ಎರಡು ಕಂತುಗಳಲ್ಲಿ ವಿತರಿಸಲಾಗುತ್ತದೆ. ಮೊದಲನೆಯದು 6 ತಿಂಗಳ ಉದ್ಯೋಗವನ್ನು ಪೂರ್ಣಗೊಳಿಸಿದ ನಂತರ ಮತ್ತು ಎರಡನೆಯದು 12 ತಿಂಗಳುಗಳನ್ನು ಪೂರ್ಣಗೊಳಿಸಿದ ನಂತರ ನೀಡಲಾಗುತ್ತದೆ ಎಂದರು.

ಹೆಚ್ಚಿನ ಉದ್ಯೋಗಿಗಳನ್ನು ನೇಮಿಸಿಕೊಳ್ಳಲು ಕಂಪನಿಗಳನ್ನು ಪ್ರೋತ್ಸಾಹಿಸಲು, ಸರ್ಕಾರವು ಎರಡು ವರ್ಷಗಳ ಅವಧಿಗೆ ಪ್ರತಿ ಉದ್ಯೋಗಿಗೆ ತಿಂಗಳಿಗೆ 3,000 ರೂ. ಪ್ರೋತ್ಸಾಹವನ್ನು ನೀಡುತ್ತದೆ. ಭಾರತವನ್ನು ಉತ್ಪಾದನಾ ಕೇಂದ್ರವನ್ನಾಗಿ ಮಾಡುವ ಗುರಿಯೊಂದಿಗೆ ಈ ವಲಯದ ಕಂಪನಿಗಳು ಹೆಚ್ಚುವರಿ ಎರಡು ವರ್ಷಗಳವರೆಗೆ ಮೂರನೇ ಮತ್ತು ನಾಲ್ಕನೇ ವರ್ಷದ ಉದ್ಯೋಗ ಈ ಪ್ರೋತ್ಸಾಹವನ್ನು ಪಡೆಯುತ್ತವೆ ಎಂದರು.

ಅರ್ಹತಾ ಮಾನದಂಡಗಳು ಈ ಯೋಜನೆಯು ನೌಕರರ ಭವಿಷ್ಯನಿಧಿ ಸಘಟನೆಯಲ್ಲಿ ನೋಂದಾಯಿಸಿಕೊಂಡಿರುವ, ಮೊದಲ ಬಾರಿಗೆ ಖಾಸಗಿ ವಲಯದಲ್ಲಿ ಕೆಲಸ ಮಾಡುತ್ತಿರುವ ಮತ್ತು ಮಾಸಿಕ 1 ಲಕ್ಷ ರೂ.ದವರೆಗೆ ಸಂಬಳ ಹೊಂದಿರುವ ವ್ಯಕ್ತಿಗಳನ್ನು ಗುರಿಯಾಗಿರಿಸಿಕೊಂಡಿದೆ. ಉದ್ಯೋಗ ಸೃಷ್ಟಿಯನ್ನು ಮತ್ತಷ್ಟು ಉತ್ತೇಜಿಸಲು, ಸುಸ್ಥಿರ ಉದ್ಯೋಗವನ್ನು ಸೃಷ್ಟಿಸುವ ಕಂಪನಿಗಳಿಗೆ ಆರ್ಥಿಕ ಪ್ರೋತ್ಸಾಹಕಗಳನ್ನು ನೀಡಲಾಗುತ್ತದೆ ಎಂದರು. ಉದ್ಯೋಗಿಯು 1 ಆಗಸ್ಟ್ 2025 ರಿಂದ 31 ಜುಲೈ 2025 ರ ನಡುವೆ ನೌಕರರ ಭವಿಷ್ಯ ನಿಧಿಗೆ ಸೇರಬೇಕು. ಆಗಸ್ಟ್ 1, 2025ರ ಮೊದಲು ಅವರು ನೌಕರರ ಭವಿಷ್ಯ ನಿಧಿ ಸಂಘಟನೆಯ ಸದಸ್ಯರಾಗಿರಬಾರದು. ಆಗಸ್ಟ್ 2025 ಅಥ–'ವಾ ನಂತರ ಭವಿಷ್ಯನಿಧಿಯ ಕೊಡುಗೆಯನ್ನು ಪಡೆಯಬೇಕು. ಮಾಸಿಕ ಒಟ್ಟು ವೇತನವು ತಿಂಗಳಿಗೆ 1 ಲಕ್ಷ ರೂ. ಕ್ಕಿಂತ ಕಡಿಮೆಯಿರಬೇಕು ಎಂದರು.

ಜೂನ್ 19ರಂದು ಪ್ರಧಾನಿಮಂತ್ರಿ ಶ್ರೀ ನರೇಂದ್ರ ಮೋದಿ ಅವರು ನವದೆಹಲಿಯ ವಿಜ್ಞಾನ ಭವನದಿಂದ ಈ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಿದ್ದು, ದೇಶದ 200 ಸ್ಥಳಗಳನ್ನು ಈ ಕಾರ್ಯಕ್ರಮದ ನೇರ ಪ್ರಸಾರ ಇರಲಿದೆ. ಅಂದು ಈ ಕಾರ್ಯಕ್ರಮ ರಾಯಚೂರು ನಗರದ ನವೋದಯ ಇನ್ಸ್ಟಿಟ್ ಆಫ್ ಟೆಕ್ನಾಲಜಿ ನಲ್ಲಿ ಈ ಕಾರ್ಯಕ್ರಮದ ನೇರ ಪ್ರಸಾರವಿದ್ದು, ಇದರಲ್ಲಿ ಜನಪ್ರತಿನಿಧಿಗಳು ಹಾಗೂ ಈ ಯೋಜನೆಯ ಫಲಾನುಭವಿಗಳು ಸೇ–ರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಪ್ರಾದೇಶಿಕ ಸಹಾಯಕ ಭವಿಷ್ಯ ನಿಧಿ ಕಚೇರಿಯ ಲೆಕ್ಕಾಧಿಕಾರಿ ಪಿ.ರಾಘವೇಂದ್ರ, ಶರಣಬಸವ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

**ನೇಮಕಾತಿ 2026 194 ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ**

**ಜೂನ್ 16, 2026**

ಏಐಈ ಖಐಊಖಒಗಐ ನೇಮಕಾತಿ 2026: 194 ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ. ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ಲಿಮಿಟೆಡ್ (KMF SHIMUL) ನವೆಂಬರ್‌ನಲ್ಲಿ KMF SHIMUL ಅಧಿಕೃತ ಅಧಿಸೂಚನೆಯ ಮೂಲಕ ಸಹಾಯಕ ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. 14–07–2026ರ ಮೊದಲು ಈ ಏಐಈ ಖಐಊಖಒಗಐ ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 14–06–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 14–07–2026 ಅಧಿಕೃತ ವೆಬ್‌ಸೈಟ್: shimul.coop

## ಹೊಸೂರಿನ ಈರಮ್ಮ ಕಾಣೆ: ಪತ್ತೆಗೆ ಗ್ರಾಮೀಣ ಪೊಲೀಸರ ಮನವಿ

ನೈಜ್ಯ ದೆಸೆ ನ್ಯೂಸ್

ರಾಯಚೂರು ಜೂನ್ 16 (ಕರ್ನಾಟಕ ವಾರ್ತೆ): ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯ ಹೊಸೂರಿನ ನಿವಾಸಿಯಾದ ಈರಮ್ಮ ಗಂಡ ಮಲ್ಲಿಕಾರ್ಜುನ (41) ಎಂಬ ಮಹಿಳೆಯು 2026ರ ಮೇ.26ರ ಬೆಳಿಗ್ಗೆ 11.30ಕ್ಕೆ ದೇವಸ್ಥಾನಕ್ಕೆ ಹೋಗಿ ಬರುವುದಾಗಿ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಗ್ರಾಮೀಣ ಪೊಲೀಸ ಠಾಣೆಯಲ್ಲಿ ಗುನ್ನೆ ನಂ: 112/2026 ಕಲಂ ಅಡಿಯಲ್ಲಿ ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.



ಕಾಣೆಯಾದ ಮಹಿಳೆ ಚಹರೆ ಪಟ್ಟಿ: ವಯಸ್ಸು 41 ವರ್ಷ, ಜಾತಿ ಕಬ್ಬೇರ, ಉದ್ಯೋಗ ಕೂಲಿ ಕೆಲಸ, ಎತ್ತರ ಅಂದಾಜು 4.5 ಅಡಿ, ಗೋದಿ ಮೈ ಬಣ್ಣ, ಗುಂಡನೇಯ ಮುಖ, ಕಪ್ಪು ಕೂದಲು ಹೊಂದಲಾಗಿದೆ. ಪಿಂಕ್ ಮಿಶ್ರೀತ ಬಿಳಿಯ ಬಣ್ಣದ ಸೀರೆ ಹಾಗೂ ಕಪ್ಪು ಹಸಿರು ಬಣ್ಣದ ಕುಪ್ಪಸ ಧರಿಸಲಾಗಿದ್ದು, ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ. ಈ ಮೇಲಿನ ಚಹರೆಯುಳ್ಳ ಮಹಿಳೆಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಠಾಣಾಧಿಕಾರಿಗಳು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಸಿಪಿಐ ಗ್ರಾಮೀಣ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803832, ಡಿಎಸ್ಪಿ ರಾಯಚೂರು ಮೊಬೈಲ್ ಸಂಖ್ಯೆ: 9480803820, ರಾಯಚೂರು ಕಂಟ್ರೋಲ್ ರೂಮ್ ದೂರವಾಣಿ ಸಂಖ್ಯೆ: 08532–235635ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 20ರಂದು ಮಾಹಿತಿ ಹಕ್ಕು ಕಾಯ್ದೆ ಕುರಿತು ಕಾರ್ಯಾಗಾರ: ಅಧಿಕಾರಿಗಳು ಕಡ್ಡಾಯವಾಗಿ ಭಾಗಿಯಾಗುವಂತೆ ಜಿಲ್ಲಾಧಿಕಾರಿ ಸೂಚನೆ

ನೈಜ್ಯ ದೆಸೆ ನ್ಯೂಸ್

ರಾಯಚೂರು ಜೂನ್ 16 (ಕರ್ನಾಟಕ ವಾರ್ತೆ): ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮದಲ್ಲಿ ರಾಯಚೂರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ಜೂನ್ 20ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಜರಾಗುವಂತೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್ ಅವರು ಕೋರಿದ್ದಾರೆ.



ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಮತ್ತು ಡಾ.ರಿಚರ್ಡ್ ವಿನ್ಸೆಂಟ್ ಡೊಸೋಜ ಅವರು ಜೂನ್.20ರ ಶನಿವಾರ ದಂದು ರಾಯಚೂರು ಜಿಲ್ಲೆಗೆ ಆಗಮಿಸಿ, ಮಾಹಿತಿ ಹಕ್ಕು ಕಾಯ್ದೆ–2005ರ ಪರಿಣಾಮಕಾರಿ ಅನುಷ್ಠಾನ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕರ್ತವ್ಯಗಳು ಹಾಗೂ ಮಾಹಿತಿ ಹಕ್ಕು ಸಂಬಂಧಿತ ವಿಷಯಗಳ ಕುರಿತು ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ನಡೆಸಲಿದ್ದಾರೆ.

## ವಿಶ್ವ ರಕ್ತದಾನಿಗಳ ದಿನಾಚರಣೆ ರಕ್ತದಾನದ ಮಹತ್ವ ತಿಳಿಸುವ ಕಾರ್ಯವಾಗಲಿ: ಎಸ್ಪಿ ಅರುಣಾಂಗ್ಶು ಗಿರಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 16 (ಕರ್ನಾಟಕ ವಾರ್ತೆ): ಅಪಘಾತದಿಂದ ಹಾಗೂ ಕಾಯಿಲೆಯಿಂದ ಪ್ರಾಣಾಪಾಯದಲ್ಲಿ ಇರುವವರ ಜೀವ ಉಳಿಸಲು ರಕ್ತದಾನ ಮಹತ್ತರ ಪಾತ್ರ ವಹಿಸುತ್ತದೆ.**

ರಕ್ತದಾನ ಮಾಡಲು ಜನರು ಮುಂದೆ ಬರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ ಅವರು ಹೇಳಿದರು. ಜೂನ್ 16ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣ ಘಟಕ ರಾಯಚೂರು, ಲಯನ್ಸ್ ಕ್ಲಬ್, ರೆಡ್ ಕ್ರಾಸ್ ಸಂಸ್ಥೆ, ರೆಡ್ ರಿಬ್ಬನ್ ಕ್ಲಬ್, ಎನ್.ಎಸ್.ಎಸ್. ಎನ್.ಸಿ.ಸಿ, ರಾಯಚೂರು ಜಿಲ್ಲೆಯ ಎಲ್ಲ ರಕ್ತ ಕೇಂದ್ರಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆಯ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.




ದೇಶದಾದ್ಯಂತ ಆಸ್ಪತ್ರೆಗಳಲ್ಲಿ ಪ್ರತಿದಿನ ಸೂಕ್ತ ಗುಂಪಿನ ರಕ್ತದ ಕೊರತೆಯಿಂದ, ಅಪಘಾತದಲ್ಲಿ ತೀವ್ರ ತರಹದ ಗಾಯದಿಂದ ರಕ್ತಸ್ರಾವವಾಗಿ ಮೃತಪಡುತ್ತಿರುವವರ ಸಂಖ್ಯೆ ಹೆಚ್ಚಾಗಿದೆ. ರಕ್ತದಾನದ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಮಾಹಿತಿ ಕೊರತೆ ಇದ್ದು, ರಕ್ತದಾನ ಮಾಡುವುದರಿಂದ ಆಗುವ ಪ್ರಯೋಜನಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ರಕ್ತದಾನದಂತಹ ಮಹತ್ವಪೂರ್ಣ ಕಾರ್ಯದಲ್ಲಿ ಭಾಗವಹಿಸುವಂತೆ ಪ್ರೇರೇಪಿಸಬೇಕು ಎಂದರು.

ರಕ್ತದಾನದಿಂದ ಕೆಲವೇ ದಿನಗಳಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ ರಕ್ತದೊತ್ತಡ, ಸಕ್ಕರೆ ಕಾಯಿಲೆಯಂತಹ ರೋಗಗಳು ದೂರವಾಗುತ್ತವೆ, ಹೊಸ ಚೈತನ್ಯ, ಉಲ್ಲಾಸ ಕಂಡುಬರುತ್ತದೆ, ಜನತೆಯಲ್ಲಿ ತಪ್ಪು ನಂಬಿಕೆ ಹಾಗೂ ತಿಳುವಳಿಕೆಯಿಂದ ಕೆಲವರು ಕೆಲವರು ರಕ್ತದಾನ ಮಾಡಲು ಮುಂದೆ ಬರುವುದಿಲ್ಲ. ಅಂತವರಿಗೆ ರಕ್ತದ ಅವಶ್ಯಕತೆ ಮಹತ್ವವನ್ನು ಮನವರಿಕೆ ಮಾಡಿ ರಕ್ತದಾನ ಮಾಡಲು ಶಿಬಿರಗಳನ್ನು ಏರ್ಪಡಿಸಬೇಕು ಎಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ರಕ್ತಕ್ಕೆ ಪರ್ಯಾಯ ವಸ್ತುವಿಲ್ಲ. ಅದನ್ನು ಕೃತಕವಾಗಿ ತಯಾರಿಸಲೂ ಸಾಧ್ಯವಿಲ್ಲ. ವ್ಯಕ್ತಿಯು ಪ್ರತಿ ಮೂರು ತಿಂಗಳಿಗೊಮ್ಮೆ ಒಂದು ಬಾರಿಯಾದರೂ ರಕ್ತದಾನ ಮಾಡಿದಲ್ಲಿ ದೇಹದಲ್ಲಿ ಹೊಸ ರಕ್ತ ಉತ್ಪಾದನೆ ಆಗುವುದರೊಂದಿಗೆ ಹೃದಯಾಘಾತ, ಕ್ಯಾನ್ಸರ್, ಹೃದಯ ಸಂಬಂಧಿ ರೋಗಗಳು ಸೇರಿದಂತೆ ವಿವಿಧ ಕಾಯಿಲೆಗಳಿಂದ ದೂರ ಉಳಿಯಬಹುದು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್‌ಸಿಹೆಚ್‌ಓ ಡಾ.ನಂದಿತಾ ಎಮ್–ಎನ್, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್, ರಿಮ್ಸ್ ಭೋದಕ ಆಸ್ಪತ್ರೆ ಪ್ರಾಂಶುಪಾಲ ಡಾ.ರಾಹುಲ್ ಕೀರ್ತಿ, ನವೋದಯ ಕಾಲೇಜಿನ ಪ್ರಾಂಶುಪಾಲ ಡಾ.ಗುರುದತ್ತ ಪವಾರ್, ಎಮ್‌ಇ ಕಾಲೇಜಿನ ದಂತ ವಿಭಾಗದ ಮುಖ್ಯಸ್ಥರಾದ ಡಾ.ಸೋಮನಾಥ ರೆಡ್ಡಿ, ಡಾ.ಅರುಣಾ ಕುಮಾರಿ, ಎಫ್‌ಡಬ್ಲ್ಯುಓ ಡಾ.ಶಿವಕುಮಾರ್ ನಾರಾ, ಡಾ.ಜಹೀರ್, ಮಹಿಳಾ ಕಾಲೇಜಿನ ಎನ್.ಎಸ್.ಎಸ್. ಅಧಿಕಾರಿ ಡಾ.ಸಂತೋಷ್, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಡ್ಯಾಪ್ಕೋ ಮೇಲ್ವಿಚಾರಕರು ಮಲ್ಲಯ್ಯ ಮಠಪತಿ, ಸಿಪಿಓ ಬಸವರಾಜಪ್ಪಗೌಡ ಸೇರಿದಂತೆ ಇಲಾಖೆಯ ಸಿಬ್ಬಂದಿಯವರು, ವೈದ್ಯಕೀಯ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು. ಜಾಥಾವು ವಿವಿಧ ಘೋಷಣೆಗಳೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ಜರುಗಿತು.

## ರಾಯಚೂರು ಮಹಾನಗರ ಪಾಲಿಕೆಯಿಂದ ಪ್ರಧಾನಮಂತ್ರಿ ಅವಾಜ್ 2.0 ಯೋಜನೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 16 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆಯ ವತಿಯಿಂದ 2026–27ನೇ ಸಾಲಿನ ನಗರ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಅವಾಜ್ ಯೋಜನೆ (ನಗರ) 2.0 ಯೋಜನೆ ಅಡಿಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾಸಲಾಗಿದೆ.**

ಈ ಯೋಜನೆಅಡಿ ವಸತಿ ರಹಿತ/ ನಿವೇಶ ರಹಿತ ಒಚಿಟಿ ಮಹಿಳೆಯರು, ವಿಕಲಚೇತನರು, ಹಿರಿಯ ನಾಗರೀಕರು, ತೃತಿಯ ಲಿಂಗಿಗಳು, ಎಸ್.ಸಿ/ ಎಸ್.ಟಿ./ ಹಿಂದುಳಿದ ಅಲ್ಪಸಂಖ್ಯಾತ ವರ್ಗದವರು ಸ್ವಚ್ಛತಾ ಕಾರ್ಮಿಕರು, ಪಿಎಮ್ ಸ್ವಾಧಿನಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ–ಬದಿ ವ್ಯಾಪಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು ಮತ್ತು ವಲಸೆ ಬಂದ ಕುಟುಂಬದವರು ತಮ್ಮ ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ: URL:http//pmay-urban.gov.in ನಲ್ಲಿ ಅಥವಾ ಸಿಎಸ್‌ಸಿ ಕೇಂದ್ರಗಳಲ್ಲಿ ಸ್ವತಃ ಅರ್ಜಿಯನ್ನು ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ಪಾಲಿಕೆಯ ಕಚೇರಿಯ ಸಮಯದಲ್ಲಿ ಕಚೇರಿಗೆ ಸಲ್ಲಿಸಬೇಕು. ಅವಧಿ ಮೀರಿ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ವಸತಿ ರಹಿತರು ನಿವೇಶನ ದಾಖಲೆಗಳಾದ ಹಕ್ಕುಪತ್ರ/ ಕ್ರಯಪತ್ರ/ ದಾನಪತ್ರ/ ಉಡುಗೊರೆ ಪತ್ರ/ ಖಾತಾ ದಾಖಲೆಗಳನ್ನು ಲಗತ್ತಿಸಿ ಕುಟುಂಬ ಸದಸ್ಯರ ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕ ಪ್ರತಿ ಮತ್ತು ನಿಗಧಿತ ನಮೂನೆ ರಲ್ಲಿ ಖಜಟಜಿ ಗಟಜಜಡಿಣಚಿಖಟರ ಸಲ್ಲಿಸುವುದು. ವಸತಿ/ ನಿವೇಶನ ರಹಿತರು ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹೊರತುಪಡಿಸಿ, ಇತರೆ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನಪ್ರಿಯ ಶಾಸಕ ಜೆ.ಎನ್. ಗಣೇಶ್‌ಗೆ ಸಚಿವ ಸ್ಥಾನ ಸಿಗಲೆಂದು ಕಂಪ್ಲಿ ಗ್ರಾಮ ದೇವತೆ ಮಾರೇಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಜೊತೆಗೆ 111 ಇಡುಗಾಯಿ ಅರ್ಪಣೆ

ನೈಜ್ಯ ದೆಸೆ ನ್ಯೂಸ್

**=ಬಳ್ಳಾರಿ / ಕಂಪ್ಲಿ : ಕಾಂಗ್ರೆಸ್ ಹೈಕಮಾಂಡ್ ಮತ್ತು ವರಿಷ್ಠರು ಅಭಿವೃದ್ಧಿ ಹರಿಕಾರ, ಜನಮೆಚ್ಚಿನ ನಾಯಕ ಶಾಸಕ ಜೆ.ಎನ್.ಗಣೇಶ ಇವರಿಗೆ ಸಚಿವ ಸ್ಥಾನ ಕಲ್ಪಿಸಿ, ಕ್ಷೇತ್ರ, ಜಿಲ್ಲೆ ಮತ್ತು ರಾಜ್ಯದ ಜನರ ಸೇವೆಗೆ ಅವಕಾಶ ಮಾಡಿಕೊಡಬೇಕೆಂದು ಹಾರೈಸಿ ಮುಖಂಡರಾದ ಸಿ.ಆರ್.ಹನುಮಂತ, ಹಬೀಬ್ ರೆಹಮಾನ್, ಸಿದ್ದಪ್ಪ, ಕೆ.ಎಸ್. ಚಾಂದ್ ಬಾಷಾ, ಕೆ.ಷಣುಕಪ್ಪ, ಬಾಲೇಸಾಬ್ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟ್ಟಣದ ಗ್ರಾಮ ದೇವತೆ ಮಾರೆಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸುವ ಜೊತೆಗೆ 111 ಇಡುಗಾಯಿ ಒಡೆಯುವ ಮೂಲಕ ಮಂಗಳವಾರ ಇಷ್ಟಾರ್ಥ ಈಡೇರಿಸುವಂತೆ ಕೋರಿದರು.**



ನಂತರ ಮುಖಂಡ ಸಿ.ಆರ್.ಹನುಮಂತ ಮಾತನಾಡಿ, ಕಂಪ್ಲಿ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ಆಗಿವೆ. ಪ್ರತಿಯೊಬ್ಬರ ಆಶೋತ್ತರಗಳಿಗೆ ಸ್ಪಂದಿಸಿದ್ದಾರೆ. ಸತತ ಎರಡು ಬಾರಿ ಶಾಸಕರಾಗಿದ್ದಾರೆ. ಆದ್ದರಿಂದ ಸಿಎಂ ಡಿ.ಕೆ.ಶಿವಕುಮಾರ, ಮಾಜಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ವರಿಷ್ಠರು ಕಂಪ್ಲಿ ಶಾಸಕ ಜೆ.ಎನ್. ಗಣೇಶಗೆ ಸಚಿವ ಸ್ಥಾನ ನೀಡಲೇಬೇಕು ಎಂದರು. ಈ ಸಂದರ್ಭದಲ್ಲಿ ಮುಖಂಡರಾದ ಕರಿಬಸವನಗೌಡ, ಬಿ.ನಾರಾಯಣಪ್ಪ, ಭಟ್ಟ ಪ್ರಸಾದ್, ಲೊಡ್ಡು ಹೊನ್ನೂರವಲಿ, ಕೆ.ಷಣ್ಮುಕಪ್ಪ, ಯಾಲ್ಪಿ ಅಬ್ದುಲ್ ಮುನಾಫ್, ಕರೇಕಲ್ ಮನೋಹರ, ಪೇಂಟರ್ ಮಸ್ತಾನ್, ಜಾಫರ್, ಹೆಚ್.ಪಿ.ಶಿಕಾರಿ ರಾಮು, ಮೆಟ್ರಿ ಗಿರಿ, ಡೆಕೋರೇಶನ್ ನಾಗರಾಜ, ಹಾಲ್ಮಾರೋ ಈರಣ್ಣ, ಕೆ.ಹೊನ್ನೂರಪ್ಪ, ಶರಣಪ್ಪಗೌಡ, ವಾಲ್ಮೀಕಿ ರಘುನಾಯಕ, ವೆಂಕಟೇಶ, ಕೃಷ್ಣ, ಗೋಪಾಲ, ಡಿಸ್ ಪ್ರಸಾದ್, ನಬೀ, ವಾಸು, ಸುಧಾಕರ, ಕೊಟ್ಟಾಲ್ ವಿರೇಶ, ಹೊನ್ನಳ್ಳಿ ಶ್ರೀದೇವಿ, ಲಕ್ಷ್ಮೀ ಸೇರಿದಂತೆ ಅನೇಕರಿದ್ದರು.

## ಅಂಬೇಡ್ಕರ್ ಆದರ್ಶಗಳು ಪ್ರತಿಯೊಬ್ಬರ ಬದುಕಿಗೆ ಬೆಳಕು : ಹೊಸಕೋಟೆ ಜಗದೀಶ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಅವರು ಸಮಾನತೆ, ಮೀಸಲಾತಿ, ಶಿಕ್ಷಣ, ಮತದಾನದ ಹಕ್ಕು ಸೇರಿದಂತೆ ನಾನಾ ಮೂಲಸೌಕರ್ಯಗಳನ್ನು ಕಲ್ಪಿಸುವ ಮೂಲಕ ಪ್ರತಿಯೊಬ್ಬರ ಬಾಳಿಗೆ ಬೆಳಕಾಗಿದ್ದಾರೆ ಎಂದು ವೀರಶೈವ ಲಿಂಗಾಯತ ಮಹಾ ವೇದಿಕೆ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ ಹೇಳಿದರು.**



ಪಟ್ಟಣದ 4ನೇ ವಾರ್ಡಿನ ಅಂಬೇಡ್ಕರ್ ಕಾಲೋನಿಯ ಸಣಾಪುರ–ಬೆಳಗೋಡಹಾಳ್ ರಸ್ತೆ ಮಧ್ಯದಲ್ಲಿ ಇತ್ತೀಚೆಗೆ ಲೋಕಾರ್ಪಣೆಗೊಂಡ ಡಾ.ಬಿ.ಆರ್. ಅಂಬೇಡ್ಕರ್, ಡಾ.ಬಾಬು ಜಗಜೀವನ್ ರಾಮ್ ಅವರ ಪುತ್ಥಳಿಗೆ ಮಾಲಾರ್ಪಣೆಯೊಂದಿಗೆ ಪುಷ್ಪ ನಮನ ಸಲ್ಲಿಸಿದ ನಂತರ ಅಂಬೇಡ್ಕರ್ ಸಂಘದ ಸನ್ಮಾನ ಸ್ವೀಕರಿಸಿ ಮಾತನಾಡಿ, ಅಂಬೇಡ್ಕರ್, ಜಗಜೀವನ್ ರಾಮ್ ಅವರ ಚರಿತ್ರೆಯ ಪುಸ್ತಕಗಳನ್ನು ಮಕ್ಕಳಿಗೆ ನೀಡಬೇಕು. ಅವರ ವಿಚಾರಧಾರೆಗಳು ಪ್ರತಿಯೊಬ್ಬರಿಗೂ ಮಾದರಿಯಾಗಿವೆ. ಬುದ್ಧ, ಬಸವ, ಅಂಬೇಡ್ಕರ್ ಅವರ ತತ್ವಾದರ್ಶಗಳ ಪರಿಪಾಲನೆಯೊಂದಿಗೆ ಉತ್ತಮ ಜೀವನದ ಕಡೆಗೆ ಸಾಗೋಣ. ಜೂ.10ರಂದು ನಡೆದ ಪುತ್ಥಳಿ ಲೋಕಾರ್ಪಣೆಗೆ ಬರುವುದಕ್ಕೆ ಆಗಲಿಲ್ಲ. ಆದ್ದರಿಂದ ಈಗ ಮಹಾನ್ ನಾಯಕರ ಪುತ್ಥಳಿಗೆ ಭೇಟಿ ನೀಡಲಾಯಿತು ಎಂದರು. ನಂತರ ಅಂಬೇಡ್ಕರ್ ಸಂಘದಿಂದ ಹೊಸಕೋಟೆ ಜಗದೀಶಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಅಂಬೇಡ್ಕರ್ ಸಂಘದ ಅಧ್ಯಕ್ಷ ರುದ್ರಮುನಿ, ಗೌರವಾಧ್ಯಕ್ಷ ಕೆ.ಹುಲುಗಪ್ಪ, ಪ್ರಧಾನ ಕಾರ್ಯದರ್ಶಿ ಟಿ.ಹೊನ್ನೂರಪ್ಪ, ಉಪಾಧ್ಯಕ್ಷರಾದ ವಿಜಯ, ಮಾರುತಿ, ಖಜಾಂಚಿ ಮಾರೇಶ, ಮುಖಂಡರಾದ ರಾಘವೇಂದ್ರ, ಹುಲುಗಣ್ಣ, ಕರಿಯಪ್ಪ ಇದ್ದರು.

# ಖಾತೆ ಕ್ಯಾತೆ ಅಂತ್ಯ ಅಧಿಕಾರ ವಹಿಸಿಕೊಂಡ : ಕೃಷ್ಣಬೈರೇಗೌಡ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಖಾತೆ ಹಂಚಿಕೆಯಾಗಿ 13 ದಿನಗಳ ಬಳಿಕ ಕೊನೆಗೂ ಸಚಿವ ಕೃಷ್ಣ ಬೈರೇಗೌಡ ಅವರು ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಜವಾಬ್ದಾರಿಯನ್ನು ಅಧಿಕೃತವಾಗಿ ವಹಿಸಿಕೊಂಡರು. ಪೂರ್ಣ ಪ್ರಮಾಣದ ಅಧಿಕಾರ ನೀಡದ ಹಿನ್ನೆಲೆಯಲ್ಲಿ ಹಲವು ದಿನಗಳಿಂದ ಅಸಮಾಧಾನ ವ್ಯಕ್ತಪಡಿಸಿ ಅಧಿಕಾರ ಸ್ವೀಕಾರದಿಂದ ದೂರ ಉಳಿದಿದ್ದ ಅವರು, ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರೊಂದಿಗೆ ನಡೆದ ಸಂಧಾನದ ಬಳಿಕ ಇಂದು ಅಧಿಕಾರ ವಹಿಸಿಕೊಂಡರು.**

ಜಿಬಿಎ ಕೇಂದ್ರ ಕಚೇರಿಗೆ ಆಗಮಿಸಿದ ಸಚಿವರು, ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಐದು ನಗರ ಪಾಲಿಕೆಗಳ ಆಯುಕ್ತರು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಮೊದಲ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲೇ ನಗರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಲವು ಪ್ರಮುಖ ನಿರ್ದೇಶನಗಳನ್ನು ನೀಡಿದರು.

ಖಾತೆ ಹಂಚಿಕೆ ವೇಳೆ ಬೆಂಗಳೂರು ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ಸಂಸ್ಥೆಗಳಾದ ಬಿಡಿಎ ಹಾಗೂ ಬಿಎಂಆರ್‌ಡಿಎ ಅಧಿಕಾರಗಳನ್ನು ತಮ್ಮ ವ್ಯಾಪ್ತಿಗೆ ನೀಡದಿರುವುದಕ್ಕೆ ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರು. ಈ ವಿಚಾರವಾಗಿ ದೆಹಲಿಯಲ್ಲಿ ಪಕ್ಷದ ಹೈಕಮಾಂಡ್ ಭೇಟಿಯೂ ನಡೆದಿತ್ತು. ಬಳಿಕ ಸುರ್ಜೆವಾಲ ಅವರೊಂದಿಗೆ ನಡೆದ ಮಾತುಕತೆಯ ನಂತರ ಇಂದು ಅಧಿಕಾರ ಸ್ವೀಕರಿಸುವ ಮೂಲಕ ರಾಜಕೀಯ ಬಿಕ್ಕಟ್ಟಿಗೆ ತಾತ್ಕಾಲಿಕ ತೆರೆ ಬಿದ್ದಂತಾಗಸಂದೇಶ:

ಮೊದಲ ದಿನವೇ ಅಧಿಕಾರಿಗಳಿಗೆ ಖಡಕ್ ಸಂದೇಶ : ಸಭೆಯಲ್ಲಿ ನಗರದ ಹಲವು ಸಮಸ್ಯೆಗಳ ಬಗ್ಗೆ ಚರ್ಚಿಸಿದ ಸಚಿವರು, ಸಾರ್ವಜನಿಕರ ಕುಂದುಕೊರತೆಗಳಿಗೆ ತ್ವರಿತ ಪರಿಹಾರ ನೀಡುವಂತೆ ಸೂಚಿಸಿದರು. ಮಳೆಯ ಹಿನ್ನೆಲೆಯಲ್ಲಿ ರಾಜಕಾಲುವೆಗಳ ಹೂಳು



ತೆರವುಗೊಳಿಸಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು. ರಸ್ತೆಗಳಲ್ಲಿ ಹೆಚ್ಚಾಗಿರುವ ಗುಂಡಿಗಳನ್ನು ಕೂಡಲೇ ಮುಚ್ಚಬೇಕು. ಇ–ಖಾತಾ ಯೋಜನೆಯನ್ನು ಇನ್ನಷ್ಟು ಜನರಿಗೆ ತಲುಪಿಸುವ ಕೆಲಸಕ್ಕೆ ವೇಗ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದಲ್ಲಿ ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿ, ಕೆರೆಗಳ ಅಭಿವೃದ್ಧಿ, ರಸ್ತೆ ಅಭಿವೃದ್ಧಿ, ಕಂದಾಯ ವಸೂಲಿ, ಬಾಕಿ ತೆರಿಗೆ ಸಂಗ್ರಹ ಹಾಗೂ ಇ–ಖಾತಾ ಅರ್ಜಿಗಳ ಪ್ರಗತಿ ಕುರಿತು ಸಚಿವರು ವಿವರವಾದ ಮಾಹಿತಿ ಪಡೆದರು. ರಾಜಕಾಲುವೆ ಸಮಸ್ಯೆಗೆ ಎಚ್ಚರಿಕೆ : ಮಳೆ ಬಂದಾಗ ರಾಜಕಾಲುವೆಗಳ ನೀರು ರಸ್ತೆಗೆ ಹರಿಯುವ ಪರಿಸ್ಥಿತಿ ಮುಂದುವರಿದರೆ ಸಂಬಂಧಪಟ್ಟ ಇಂಜಿನಿಯರ್‌ಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಸಚಿವರು ಎಚ್ಚರಿಕೆ ನೀಡಿದರು. ನಗರದಲ್ಲಿನ 75 ಪ್ರಮುಖ ಜಂಕ್ಷನ್‌ಗಳ ಅಭಿವೃದ್ಧಿಗೆ ಆದ್ಯತೆ ನೀಡುವಂತೆ ಸೂಚಿಸಿದರು.

ಇದರ ಜೊತೆಗೆ ಪ್ರೀಮಿಯಂ ಎಫ್–ಎಆರ್, ಶಿಕ್ಷಣ ಹಾಗೂ ಸರ್ಕಾರಿ ಆಸ್ಪತ್ರೆಗಳ ಅಭಿವೃದ್ಧಿ, ಪಾದಚಾರಿ ಮಾರ್ಗಗಳ ಸುಧಾರಣೆ, ಕಸ ನಿರ್ವಹಣೆ, ಘನತ್ಯಾಜ್ಯ ನಿರ್ವಹಣಾ ಶುಲ್ಕ ಸಂಗ್ರಹ, ಜಿಬಿಎ ಕಾಯ್ದೆಯ ಅನುಷ್ಠಾನ, ಒತ್ತುವರಿ ಕಟ್ಟಡಗಳಿಗೆ ನೋಟಿಸ್ ನೀಡುವುದು ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ ನಡೆಯಿತು.

ಕಲ್ಯಾಣ ಯೋಜನೆಗಳಿಗೆ ವೇಗ : 'ನಮ್ಮ ಕ್ಲಿನಿಕ್' ಹಾಗೂ 'ಇಂದಿರಾ ಕ್ಯಾಂಟೀನ್' ಯೋಜನೆಗಳ ಅಭಿವೃದ್ಧಿಗೆ ಒತ್ತು ನೀಡುವಂತೆ ಸೂಚಿಸಿದ ಸಚಿವರು, ಕಲ್ಯಾಣ ಇಲಾಖೆಯಲ್ಲಿ ಕಳೆದ ಮೂರು ವರ್ಷಗಳಿಂದ ಬಾಕಿ ಉಳಿದಿರುವ ಯೋಜನೆಗಳ ಪಟ್ಟಿ ಪರಿಶೀಲಿಸಿ, ಬಾಕಿ ಅನುದಾನವನ್ನು ತ್ವರಿತವಾಗಿ ಬಿಡುಗಡೆ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಒಟ್ಟಾರೆ, ಹಲವು ದಿನಗಳ ರಾಜಕೀಯ ಅಸಮಾಧಾನದ ಬಳಿಕ ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಅಧಿಕಾರ ವಹಿಸಿಕೊಂಡ ಕೃಷ್ಣ ಬೈರೇಗೌಡ, ಮೊದಲ ದಿನವೇ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ, ಸಾರ್ವಜನಿಕ ಸಮಸ್ಯೆಗಳ ತ್ವರಿತ ಪರಿಹಾರ ಹಾಗೂ ಅಧಿಕಾರಿಗಳ ಹೊಣೆಗಾರಿಕೆಗೆ ಒತ್ತು ನೀಡಿ ಆಡಳಿತಕ್ಕೆ ಹೊಸ ಸಂದೇಶ ರವಾನಿಸಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಹೆಲ್ತ್ ಸ್ಯಾನಿಟರಿ ಇನ್ಸ್‌ಪೆಕ್ಟರ್''

ಹೆಲ್ತ್ ಸ್ಯಾನಿಟರಿ ಇನ್ಸ್‌ಪೆಕ್ಟರ್'' (Health Sanitary Inspector) ವೃತ್ತಿಯ ಒಂದು ವರ್ಷದ ತರಬೇತಿ ಅವಧಿಯಲ್ಲಿ, ಅಭ್ಯರ್ಥಿಗೆ ಉದ್ಯೋಗ ಸಂಬಂಧಿತ ವೃತ್ತಿಪರ ಕೌಶಲ್ಯ (Professional Skill), ವೃತ್ತಿಪರ ಜ್ಞಾನ (Professional Knowledge) ಹಾಗೂ ಉದ್ಯೋಗಾರ್ಹತಾ ಕೌಶಲ್ಯಗಳು (Employability Skills) ಕುರಿತು ತರಬೇತಿ ನೀಡಲಾಗುತ್ತದೆ. ಇದಲ್ಲದೆ, ಆತ್ಮವಿಶ್ವಾಸವನ್ನು ವೃದ್ಧಿಸುವ ಉದ್ದೇಶದಿಂದ ಯೋಜನಾ ಕಾರ್ಯಗಳು, ಪಠ್ಯೇತರ ಚಟುವಟಿಕೆಗಳು ಹಾಗೂ ಕಾರ್ಯಕ್ಷೇತ್ರದಲ್ಲಿನ ತರಬೇತಿ (On-the-Job Training) ನೀಡಲಾಗುತ್ತದೆ. ವೃತ್ತಿಪರ ಕೌಶಲ್ಯ ವಿಷಯದಲ್ಲಿ ಒಳಗೊಂಡಿರುವ ಪ್ರಮುಖ ಅಂಶಗಳು ಹೀಗಿವೆ: ಕೋರ್ಸ್ ಪೂರ್ಣಗೊಂಡ ನಂತರ ತರಬೇತಿದಾರರು ವಿವಿಧ ವಯೋಮಾನದವರಿಗಾಗಿ ಅಗತ್ಯ ಪರಿಸ್ಥಿತಿಗಳಿಗೆ ಅನುಗುಣವಾಗಿ ಪೌಷ್ಟಿಕಾಂಶ ಯೋಜನೆಗಳನ್ನು ರೂಪಿಸಲು, ಸಮತೋಲನ ಆಹಾರವನ್ನು ವಿನ್ಯಾಸಗೊಳಿಸಲು ಹಾಗೂ ವ್ಯಕ್ತಿಯ ಅಗತ್ಯಕ್ಕೆ ಅನುಗುಣವಾಗಿ ಕ್ಯಾಲೊರಿ ಮತ್ತು ಪೌಷ್ಟಿಕಾಂಶದ ಅವಶ್ಯಕತೆಗಳನ್ನು ಲೆಕ್ಕ ಹಾಕಿ ಸಲಹೆ ನೀಡಲು ಸಮರ್ಥರಾಗುತ್ತಾರೆ. ವಿವಿಧ ಪೋಷಕಾಂಶಗಳ ಕೊರತೆಯಿಂದ ಉಂಟಾಗುವ ರೋಗಗಳನ್ನು ಗುರುತಿಸಬಹುದು. ಅವರು ರೋಗಗಳ ಲಕ್ಷಣಗಳನ್ನು ಪರಿಶೀಲಿಸಿ, ಆಹಾರ ಕಲಬೆರಕೆಯನ್ನು ಪತ್ತೆಹಚ್ಚಿ ವರದಿ ಮಾಡಬಹುದು ಹಾಗೂ ವಿವಿಧ ಆಹಾರ ಪದಾರ್ಥಗಳಿಗೆ ಸೂಕ್ತವಾದ ಆಹಾರ ಸಂರಕ್ಷಣಾ ವಿಧಾನಗಳನ್ನು ಸೂಚಿಸಬಹುದು. ನೀರು ಮತ್ತು ಅದರ ಗುಣಲಕ್ಷಣಗಳು, ನೀರಿನ ಮಾಲಿನ್ಯದ ಕಾರಣಗಳನ್ನು ಅರ್ಥಮಾಡಿಕೊಳ್ಳಬಹುದು. ನಗರ ಹಾಗೂ ಗ್ರಾಮೀಣ ಪ್ರದೇಶಗಳ ನೀರು ಸರಬರಾಜು ಮತ್ತು ನೀರು ಶುದ್ಧೀಕರಣ ವ್ಯವಸ್ಥೆಗಳನ್ನು ವಿವರಿಸಬಹುದು. ನೀರಿನ ಸಂರಕ್ಷಣೆಗೆ ಕೊಳಾಯಿ (Plumbing) ವ್ಯವಸ್ಥೆಗಳನ್ನು ಅಳವಡಿಸುವುದು ಹಾಗೂ ಮಳೆನೀರು ಸಂಗ್ರಹಣೆ (Rainwater Harvesting) ತಂತ್ರಗಳನ್ನು ಅಭಿವೃದ್ಧಿಪಡಿಸಬಹುದು. ತರಬೇತಿದಾರರು ನೀರಿನ ಶುದ್ಧೀಕರಣ ಪ್ರಕ್ರಿಯೆಗಳನ್ನು ಅರ್ಥಮಾಡಿಕೊಂಡು, ಪರಿಸರ ಮತ್ತು ಮಾನವ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ನಗರ ಅಥವಾ ಪಟ್ಟಣಗಳ ಮಾನವ ಮಲಮೂತ್ರ (Night Soil) ನಿರ್ವಹಣೆಯನ್ನು ಕೈಗೊಳ್ಳಲು ಸಮರ್ಥರಾಗುತ್ತಾರೆ. ಒಂದು ಪ್ರದೇಶ ಅಥವಾ ಸಣ್ಣ ಪಟ್ಟಣಕ್ಕೆ ಘನ ತ್ಯಾಜ್ಯ ನಿರ್ವಹಣಾ ವ್ಯವಸ್ಥೆಯನ್ನು ಯೋಜಿಸಬಹುದು.ಶೈಕ್ಷಣಿಕ ಅರ್ಹತೆ: ಸಾಮಾನ್ಯವಾಗಿ 10ನೇ ತರಗತಿ (SSLC) ಉತ್ತೀರ್ಣರಾಗಿರಬೇಕು. ವಯೋಮಿತಿ: ಸಾಮಾನ್ಯವಾಗಿ 14 ರಿಂದ 40 ವರ್ಷಗಳೊಳಗಿನವರು ಅರ್ಜಿ ಸಲ್ಲಿಸಬಹುದು. (ಸಂಸ್ಥೆ ಮತ್ತು ಸರ್ಕಾರದ ನಿಯಮಗಳ ಪ್ರಕಾರ ವ್ಯತ್ಯಾಸ ಇರಬಹುದು.)

## ವಾಲ್ಮೀಕಿ ನಗರ ಘಟಕ ಅಧ್ಯಕ್ಷರಾಗಿ ವಾಲ್ಮೀಕಿ ಈರಣ್ಣ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಕಂಪ್ಲಿ: ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಕಂಪ್ಲಿ ನಗರ ಘಟಕದ ನೂತನ ಅಧ್ಯಕ್ಷರಾಗಿ ವಾಲ್ಮೀಕಿ ಈರಣ್ಣ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.**



ಪಟ್ಟಣದ ಎಸ್‌ಎನ್‌ಪೇಟೆಯ ಶಿರಿಡಿ ಸಾಯಿಬಾಬಾ ದೇವಸ್ಥಾನ ಬಳಿಯಲ್ಲಿರುವ ವಾಲ್ಮೀಕಿ ಸಮುದಾಯ ಭವನದಲ್ಲಿ ನಡೆದ ಸಮಾಜದ ಸಂಘಟನಾ ಸಭೆಯಲ್ಲಿ ಸಮುದಾಯದವರು ಒಮ್ಮತದೊಂದಿಗೆ ನಗರ ಘಟಕದ ಅಧ್ಯಕ್ಷರನ್ನಾಗಿ ವಾಲ್ಮೀಕಿ ಈರಣ್ಣ ಇವರನ್ನು ಆಯ್ಕೆ ಮಾಡಿದರು. ನಂತರ ಮಾಲಾರ್ಪಣೆಯೊಂದಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ನರ?ಗಂಟಿ ವಿರೇಶ, ಮುಖಂಡರಾದ ಬಿ.ನಾರಾಯಣಪ್ಪ, ಮರಿಯಪ್ಪ, ಬಿ.ಲಕ್ಷ್ಮಣ, ದುರುಗಪ್ಪ, ಬಸವರಾಜ, ಜೆ.ನಾಗರಾಜ, ಪೈಲ್ವಾನ್ ವಿರೇಶ, ಟ್ಯಾಕ್ಸಿ ಈರಣ್ಣ, ವೆಂಕಟೇಶ, ಗೋವಿಂದಪ್ಪ, ಎಂ.ಬಸಪ್ಪ, ಮರಿಲಿಂಗಪ್ಪ, ದೊಡ್ಡಬಸಪ್ಪ ಸೇರಿದಂತೆ ಸಮಾಜದವರು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಭಕ್ತಿ ಸಂಗೀತದ ಸುಮಧುರ ಸವಿ: ಗಾನಸುಧೆ ಕಲಾಬಳಗದಿಂದ ಗಾಯನ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಗಾನಸುಧೆ ಕಲಾಬಳಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಜವಾಹರ ನಗರದ ಪ್ರಾರ್ಥನಾ ಮಂದಿರದಲ್ಲಿ ಭಕ್ತಿ ಗೀತೆಗಳ ಸಂಗೀತ ಕಾರ್ಯಕ್ರಮ ಆಯೋಜಿಸಲಾಯಿತು.**

ಕಾರ್ಯಕ್ರಮದಲ್ಲಿ ಯುವ ಗಾಯಕರು ವಿವಿಧ ಕನ್ನಡ ಹಾಗೂ ದೈವಭಕ್ತಿ ಗೀತೆಗಳನ್ನು ಸುಶ್ರಾವ್ಯವಾಗಿ ಪ್ರಸ್ತುತಪಡಿಸಿ ನೆರೆದಿದ್ದ ಸಂಗೀತಾಭಿಮಾನಿಗಳ ಮೆಚ್ಚುಗೆಗೆ



ಪಾತ್ರರಾದರು. ಭಕ್ತಿ ಸಂಗೀತದ ಮೂಲಕ ಸಾಂಸ್ಕೃತಿಕ ಪರಂಪರೆ, ಆಧ್ಯಾತ್ಮಿಕ ಮೌಲ್ಯಗಳು ಹಾಗೂ ಭಾರತೀಯ ಸಂಸ್ಕೃತಿಯ ಮಹತ್ವವನ್ನು ಜನರಿಗೆ ಪರಿಚಯಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಗಾಯಕರ ಸುಮಧುರ ಕಂಠಸಿರಿಗೆ ಸಂಗೀತಾಸಕ್ತರು ಮೆಚ್ಚುಗೆ ವ್ಯಕ್ತಪಡಿಸಿ, ಇಂತಹ ಕಾರ್ಯಕ್ರಮಗಳು ಯುವ ಪ್ರತಿಭೆಗಳಿಗೆ ಉತ್ತಮ ವೇದಿಕೆಯಾಗಿವೆ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ವಿನೋದ್ ಕುಮಾರ್ ಆಶಾಪುರ್, ಸುರೇಶ್ ಬಾಬು, ನಿಖಿಲ್, ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## "ಕಡು ಭ್ರಷ್ಟಾಚಾರದ ವಿರುದ್ಧದ ನೈತಿಕ ಹೋರಾಟಕ್ಕೆ ಬೆಂಬಲಿಸಿ"

❑ ನೈಜ್ಯ ದೆಸೆ ನ್ಯೂಸ್

**ಪೋತ್ನಾಳ್ –: ಸಮೀಪದ ಮಾನವಿ ತಾಲೂಕಿನ ಉಟಕನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 2025–26–27ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನ, ಎಸ್‌ಬಿಎಂ ಖಾತೆ ಹಾಗೂ ನಂಬರ್–01 ಖಾತೆಗಳಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಕುರಿತು ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿ ಉಟಕನೂರು ಗ್ರಾಮ ಪಂಚಾಯತಿ ನಾಗರಿಕರ ವೇದಿಕೆ ಗ್ರಾಮಸಭೆ, ವಾರ್ಡ್ ಸಭೆ ಹಾಗೂ ಸಾಮಾನ್ಯ ಸಭೆಗಳನ್ನು ನಡೆಸದೇ ಕ್ರಿಯಾ ಯೋಜನೆ ರೂಪಿಸಲಾಗಿದೆ**



ಎಂದು ಆರೋಪಿಸಿ, ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ.

ಈ ಸಂಬಂಧ ತಹಸೀಲ್ದಾರ–



ರಿಗೆ ಮನವಿ ಸಲ್ಲಿಸಲಾಗಿದ್ದು, ಜೂನ್ 17ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಉಟಕನೂರು ಗ್ರಾಮ ಪಂಚಾಯತಿ ಕಾರ್ಯಾಲಯದ ಮುಂದೆ ಪ್ರತಿಭಟನೆ ಹಾಗೂ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ನಡೆಸಲು ಮುಂದಾಗಿದ್ದು ಈ ಧರಣಿಯಲ್ಲಿ ಮೂಲ ಸೌಲಭ್ಯ ವಂಚಿತ ಎಲ್ಲಾ ಗ್ರಾಮದ ಸಾರ್ವಜನಿಕರು, ಮುಖಂಡರು, ಪ್ರಜ್ಞಾವಂತ ಯುವಕರು, ವಿವಿಧ ಸಂಘ ಸಂಸ್ಥೆಗಳು ಭಾಗವಹಿಸಿ ಭ್ರಷ್ಟಾಚಾರ ಮಾಡಿದ ಅಧಿಕಾರಿಗಳಿಗೆ ತಕ್ಕ ಶಿಕ್ಷೆ ಹಾಗೂ ಕಬಳಿಕೆ ಮಾಡಿದ ಹಣ ಮತ್ತೆ ಪಂಚಾಯತಿ ಖಜಾನೆ ಸೇರಿ ಅಭಿರುದ್ಧಿ ಕಾರ್ಯಗಳು ನಡೆಯಲು ಸಹಕಾರಿ ಆಗುವಂತೆ ಮಾಡಲು ಹೋರಾಟದ ಮೂಲಕ ಬಿಸಿ ಮುಟ್ಟಿಸಲು ಈ ಕಾರ್ಯಕ್ರಮ ಯಶಸ್ವಿಗೊಳಿಸಲು ಹೋರಾಟಗಾರರಾದ ಮಲ್ಲು ನಾಯಕ ತಡಕಲ್, ಬಸವರಾಜ ಬಾಗಲವಾಡ, ಮಹಾಂತೇಶ ನಾಯಕ ತಡಕಲ್ ಮನವಿ ಮಾಡಿದ್ದಾರೆ.

## ತಿಪ್ಪನಹಟ್ಟಿ ಗ್ರಾಮಕ್ಕೆ ನಿಗಧಿತ ಸಮಯಕ್ಕೆ ಬಸ್ ಸಂಚರಿಸಲು ಗ್ರಾಮಸ್ಥರು ವಿದ್ಯಾರ್ಥಿಗಳಿಂದ ಮನವಿ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ತಿಪ್ಪನಹಟ್ಟಿ ಗ್ರಾಮಕ್ಕೆ ಸಾಯಂಕಾಲ ಬಸ್ ಬಿಡುವು ಮೂಲಕ ಗ್ರಾಮಸ್ಥರಿಗೆ ಶಾಲಾ ಕಾಲೇಜಿನ ಮಕ್ಕಳಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಡಿಪೋ ಮೆನೇಜರ್ ಅವರಿಗೆ ತಿಪ್ಪನಹಟ್ಟಿ ಗ್ರಾಮದ ಜನರು ಮತ್ತು ಶಾಲಾ ಕಾಲೇಜಿನ ಮಕ್ಕಳು ಮನವಿ ಪತ್ರ ಸಲ್ಲಿಸಿದರು.**

ತಾಲೂಕಿನ ತಿಪ್ಪನಹಟ್ಟಿ ಗ್ರಾಮಕ್ಕೆ ತಾಲೂಕು ಕೇಂದ್ರ ಕೇಂದ್ರದಿಂದ ಬೆಳಿಗ್ಗೆ ಹಾಗೂ ಮಧ್ಯಾಹ್ನ ಮಾತ್ರ ಬಸ್ ಬರುತ್ತಿದೆ. ಸಾಯಂಕಾಲ 5 ರಿಂದ 5:30 ರ ಸುಮಾರಿಗೆ ಒಮ್ಮೆ ಬಸ್ ಪಗಡದಿನ್ನಿಯವರಿಗಾದರು ಬಿಡಲು



ಡಿಪೋ ಮೆನೇಜರ್ ಅವರಿಗೆ ಈಗಾಗಲೇ ಅನೇಕ ಬಾರಿ ಮನವಿ ಮಾಡಿಕೊಂಡಿದ್ದೇವೆ. ಆದರೂ ನಿರ್ಲಕ್ಷ್ಯ ವಹಿಸಿದ್ದಾರೆಂದು ತಿಪ್ಪನಹಟ್ಟಿ ಗ್ರಾಮಸ್ಥರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಆರೋಪ ಮಾಡಿದರು.

ಈ ಸಂದರ್ಭದಲ್ಲಿ: ಮುಖಂಡರಾದ ಎಸ್.ವೆಂಕಣ್ಣ, ಬೀರಪ್ಪ ಆನ್ವರಿ, ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷ ಮೊಮ್ಮಿನ್ ಸಾಬ್, ವಿಶ್ವನಾಥಗೌಡ, ಹನುಮಂತಪ್ಪ ತಳವಾರ್, ಮಲ್ಲಪ್ಪ ಹಂಚಿನಾಳ, ಮೆಹಬೂಬ್ ಸಾಬ್, ಬಸಪ್ಪ ಅಂಗಡಿ, ವಿದ್ಯಾರ್ಥಿಗಳಾದ ಸುನಿಲ್ ನಾಯಕ, ಅಪ್ಪಾಜಿ ನಾಯಕ, ಎಚ್.ಶ್ರೀಶೈಲ, ಸಾನಿಯಾ, ಸ್ವಪ್ನ, ವಿ.ಕೆ.ನವಾಜ್, ಭವಾನಿ, ಸ್ವೇತಾ, ಐಶ್ವರ್ಯ, ಸೇರಿದಂತೆ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಘಟಕ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.

## ಅಕ್ಕ–ತಂಗಿಯರ ಮೇಲೆ ಕಾಮುಕನ ಕಿರುಕುಳ, ಪೋಕ್ಸೋ ಕಾಯ್ದೆಯಡಿ ಪ್ರಕರಣ ಅರೋಪಿ ಬಂಧನ!

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: 9 ವರ್ಷದ ಅಕ್ಕ–ತಂಗಿಯರ ಮೇಲೆ ಕಾಮುಕನ ಕಿರುಕುಳ, ಬೆದರಿಕೆ ಹಾಕಿ ಲೈಂಗಿಕ ದೌರ್ಜನ್ಯ ಆರೋಪ ಪೋಕ್ಸೋ ಕಾಯ್ದೆಯಡಿ ಪ್ರಕರಣ ಆರೋಪಿ ಬಂಧನ!ಬೆದರಿಕೆ, ಭಯ, ಬಳಿಕ ಸ್ಫೋಟಗೊಂಡ ಸತ್ಯ ಸಿಂಧನೂರಿನಲ್ಲಿ ಬೆಚ್ಚಿಬೀಳಿಸಿದ ಪ್ರಕರಣ!**

ಸಿಂಧನೂರು ನಗರದಲ್ಲಿ ಮಾನವೀಯತೆಯೇ ತಲೆತಗ್ಗಿಸುವಂತಹ ಘಟನೆ ಬೆಳಕಿಗೆ ಬಂದಿದ್ದು, 9 ವರ್ಷದ ಅಕ್ಕ–ತಂಗಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ



ಆರೋಪದ ಮೇಲೆ ವ್ಯಕ್ತಿಯೊಬ್ಬನ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲು ಮಾಡಲಾಗಿದೆ. ನಗರದ ವಾರ್ಡ್ ನಂ.30ರ ಸಮೀಪದ ಅಯ್ಯಪ್ಪಸ್ವಾಮಿ ದೇವಸ್ಥಾನ ಬಳಿಯ ಗೀತಾ ಐಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿದ್ದ ಬಾಬು ತಂದೆ ಖಾದರ್ ಸಾಬ್ ಮಸ್ಕಿ (30) ಎಂಬಾತ, ಶಾಲೆ ಮುಗಿಸಿಕೊಂಡು ಮನೆ ಸಮೀಪ ಆಟವಾಡುತ್ತಿದ್ದ ಇಬ್ಬರು ಬಾಲಕಿಯರನ್ನು ತನ್ನ ಮನೆಗೆ ಕರೆದುಕೊಂಡು ಹೋಗಿ ದೌರ್ಜನ್ಯ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ.

ಈ ಘಟನೆಯ ಬಳಿಕ ವಿಷಯವನ್ನು ಯಾರಿಗಾದರೂ ತಿಳಿಸಿದರೆ ನಿಮ್ಮ ತಂದೆ–ತಾಯಿಯನ್ನು ಕೊಲೆ ಮಾಡುವುದಾಗಿ ಬಾಲಕಿಯರಿಗೆ ಬೆದರಿಕೆ ಹಾಕಿದ್ದಾನೆ ಎನ್ನಲಾಗಿದೆ. ಈ ಬೆದರಿಕೆಯಿಂದ ಭಯಗೊಂಡಿದ್ದ ಬಾಲಕಿಯರು ತಕ್ಷಣ ವಿಷಯವನ್ನು ಬಹಿರಂಗ ಪಡಿಸದೇ ಇದ್ದು, ಒಂದು ದಿನದ ಬಳಿಕ ಘಟನೆ ಬೆಳಕಿಗೆ ಬಂದಿದೆ. ಮಕ್ಕಳ ಹೇಳಿಕೆ ಹಾಗೂ ಪೋಷಕರ ದೂರಿನ ಆಧಾರದ ಮೇಲೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು ತಕ್ಷಣ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ.

# ಭಾರತದಲ್ಲಿ ಟೆಲಿಗ್ರಾಮ್‌ಗೆ ತಾತ್ಕಾಲಿಕ ನಿಷೇಧ

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ: ವೈದ್ಯಕೀಯ ಪ್ರವೇಶ ಪರೀಕ್ಷೆಯಾದ ನೀಟ್ ಮರು ಪರೀಕ್ಷೆಯನ್ನು ಅತ್ಯಂತ ಪಾರದರ್ಶಕ ಹಾಗೂ ಸುರಕ್ಷಿತವಾಗಿ ನಡೆಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ದೇಶಾದ್ಯಂತ ಜನಪ್ರಿಯ ಮೆಸೇಜಿಂಗ್ ಆಪ್ ಆದ 'ಟೆಲಿಗ್ರಾಮ್' ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲು ನಿರ್ಧರಿಸಿದೆ.**

ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ನೀಡಿರುವ ಅಧಿಕೃತ ನಿರ್ದೇಶನದ ಪ್ರಕಾರ, ಭಾರತದಲ್ಲಿ ಜೂನ್ 22, 2026 ರವರೆಗೆ ಟೆಲಿಗ್ರಾಮ್ ಸೇವೆಗಳು ತಾತ್ಕಾಲಿಕವಾಗಿ ಲಭ್ಯವಿರುವುದಿಲ್ಲ. ಜೂನ್ 21 ರಂದು ದೇಶಾದ್ಯಂತ ಬಿಗಿಯಾದ ಭದ್ರತೆಯೊಂದಿಗೆ ನೀಟ್ ಮರು ಪರೀಕ್ಷೆ ನಡೆಯಲಿದ್ದು, ಪರೀಕ್ಷೆಗೆ ಸಂಬಂಧಿಸಿದ ಯಾವುದೇ ಮಾಹಿತಿ ಅಥವಾ ಪ್ರಶ್ನೆಪತ್ರಿಕೆಗಳು ಸಾಮಾಜಿಕ ಮಾಧ್ಯಮಗಳಲ್ಲಿ ಸೋರಿಕೆಯಾಗದಂತೆ




ತಡೆಯಲು ಈ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ.

ನೀಟ್ ಪರೀಕ್ಷೆ ನಡೆಸುವ ಜವಾಬ್ದಾರಿ ಹೊತ್ತಿರುವ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಕೇಂದ್ರ ಸರ್ಕಾರದ ಈ ತ್ವರಿತ ಮತ್ತು ಕಠಿಣ ನಿರ್ಧಾರವನ್ನು ಮುಕ್ತಕಂಠದಿಂದ ಸ್ವಾಗತಿಸಿದೆ. ಈ ತಾತ್ಕಾಲಿಕ ನಿಷೇಧವು ಪರೀಕ್ಷೆಯ ನ್ಯಾಯಸಮ್ಮತತೆ ಕಾಪಾಡಲು ಮತ್ತು ದೇಶದ ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳಿಗೆ ಯಾವುದೇ ಅನ್ಯಾಯವಾಗದಂತೆ ತಡೆಯಲು ನೆರವಾಗಲಿದೆ ಎಂದು ಎನ್‌ಟಿಎ ತಿಳಿಸಿದೆ.

ಜೂನ್ 21 ರಂದು ನಡೆಯಲಿರುವ ನೀಟ್ ಮರು ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮ ಅಥವಾ ವದಂತಿಗಳು ಹರಡದಂತೆ ತಡೆಯಲು ಕೇಂದ್ರ ಸರ್ಕಾರವು ಮುಂಜಾಗ್ರತಾ ಕ್ರಮವಾಗಿ ಜೂನ್ 22 ರವರೆಗೆ ಭಾರತದಲ್ಲಿ ಟೆಲಿಗ್ರಾಮ್ ಆಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿದೆ. ಭಾರತದಲ್ಲಿ ಟೆಲಿಗ್ರಾಂ ಬಳಸುತ್ತಿರುವವರು ಎಷ್ಟು ಮಂದಿ?: ಇತ್ತೀಚಿನ ಅಂಕಿ ಅಂಶಗಳ ಪ್ರಕಾರ ಭಾರತದಲ್ಲಿ ಸರಿಸುಮಾರು 10 ಕೋಟಿಗೂ ಹೆಚ್ಚು ಮಂದಿ ಟೆಲಿಗ್ರಾಂ ಸಕ್ರಿಯ ಬಳಕೆದಾರರಿದ್ದಾರೆ. ಜಾಗತಿಕವಾಗಿ ಟೆಲಿಗ್ರಾಮ್ ಆಪ್ ಡೌನ್‌ಲೋಡ್ ಆಗುವ ಒಟ್ಟು ಪ್ರಮಾಣದಲ್ಲಿ ಸುಮಾರು ಶೇ. 22 ರಷ್ಟು ಪಾಲು ಭಾರತದ್ದೇ ಆಗಿದೆ. ಭಾರತದ ಇಂಟರ್ನೆಟ್ ಬಳಕೆದಾರರಲ್ಲಿ ಶೇ. 39 ರಷ್ಟು ಜನರು ವಿವಿಧ ಅಗತ್ಯಗಳಿಗಾಗಿ ಟೆಲಿಗ್ರಾಮ್ ಅನ್ನು ಬಳಸುತ್ತಾರೆ.

ಈ ತಾತ್ಕಾಲಿಕ ನಿಷೇಧದಿಂದಾಗಿ ಸಾಮಾನ್ಯ ಬಳಕೆದಾರರಿಗೆ ಕೆಲವು ದಿನಗಳ ಕಾಲ ತೊಂದರೆಯಾಗಲಿದ್ದರೂ, ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಮತ್ತು ಪರೀಕ್ಷೆಯ ಭದ್ರತೆಯ ಹಿತದೃಷ್ಟಿಯಿಂದ ಈ ಕ್ರಮ ಅನಿವಾರ್ಯವಾಗಿತ್ತು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತಿಳಿಸಿದೆ. ಎಡಿಟಿಂಗ್ ವೈಶಿಷ್ಟ್ಯದ ಮೇಲೂ ನಿರ್ಬಂಧ: ಟೆಲಿಗ್ರಾಮ್ ಆಪ್ ಮೇಲಿನ ನಿಷೇಧ ಜೂನ್ 22ಕ್ಕೆ ಮುಗಿದರೂ, ಜೂನ್ 30ರವರೆಗೆ ಭಾರತದಲ್ಲಿ ಈ ಮೆಸೇಜ್ ಎಡಿಟಿಂಗ್ ವೈಶಿಷ್ಟ್ಯವನ್ನು ನಿಷ್ಕ್ರಿಯಗೊಳಿಸುವಂತೆ ಟೆಲಿಗ್ರಾಮ್ ಸಂಸ್ಥೆಗೆ ಸರ್ಕಾರ ಆದೇಶಿಸಿದೆ.

ಟೆಲಿಗ್ರಾಮ್‌ನಲ್ಲಿ ಹಳೆಯ ಸಂದೇಶಗಳ ಸಮಯವನ್ನು ಬದಲಾಯಿಸದೆ, ಅವುಗಳ ಒಳಗಿನ ಪಠ್ಯವನ್ನು ಎಡಿಟ್ ಮಾಡಬಹುದು.

## ರೈತರ ಬಡ್ಡಿ ರಹಿತ ಸಾಲ ಸೌಲಭ್ಯದ ದುರುಪಯೋಗಕ್ಕೆ ಕಡಿವಾಣ ಹಾಕಿ : ಅಧಿಕಾರಿಗಳಿಗೆ ಸಿಎಂ ಡಿ.ಕೆ.ಶಿವಕುಮಾರ್ ಸೂಚನೆ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು; ರಾಜ್ಯದಲ್ಲಿ ಒಬ್ಬ ರೈತನಿಗೂ ವಂಚನೆ ಆಗಲು ಬಿಡಬಾರದು. ಅದರಂತೆ 5 ಲಕ್ಷದವರೆಗೂ ಬಡ್ಡಿ ರಹಿತ ಸಾಲ ಸೌಲಭ್ಯ ದುರುಪಯೋಗ ಆಗದಂತೆ ಕಡಿವಾಣ ಹಾಕಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ.**

ಸೋಮವಾರ ವಿಧಾನಸೌಧ ಸಮಿತಿ ಕೊಠಡಿಯಲ್ಲಿ ಕೃಷಿ ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಸಹಕಾರ, ಕೃಷಿ ಮಾರುಕಟ್ಟೆ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ರೈತರಿಗೆ ಅಗತ್ಯ ಮಾಹಿತಿ ಪೂರೈಸಲು ಅಧಿಕಾರಿಗಳು ಮುಂದಾಗಬೇಕು ಎಂದು ಸೂಚನೆ ನೀಡಿದರು. ಅತಿವೃಷ್ಟಿ, ಅನಾವೃಷ್ಟಿ ಎದುರಿಸಲು ಸನ್ನದ್ಧರಾಗಬೇಕು. ಜತೆಗೆ, ಕ್ರಿಮಿನಾಶಕ ಮತ್ತಿತರ ಔಷಧ ಸಿಂಪರಣೆ ಸಲಕರಣೆಗಳ ನೆರವನ್ನು ರೈತರಿಗೆ ಒದಗಿಸಬೇಕು. ಅದೇ ರೀತಿ, ಕೃಷಿ ಹೊಂಡಗಳಿಗೆ ಬಿದ್ದು ಸಾವನ್ನಪ್ಪುವ ಘಟನೆಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಹೊಂಡಗಳಿಗೆ ಬೇಲಿ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಿ. ಇದಕ್ಕೆ ಹಣಕಾಸಿನ ನೆರವು ಸಂಬಂಧ ಅಗತ್ಯ ಯೋಜನೆ ರೂಪಿಸಿ ಎಂದು ಅವರು ಹೇಳಿದರು.

ಇತರೆ ರಾಜ್ಯಗಳಲ್ಲಿರುವ ಮಾದರಿ ಯೋಜನೆ, ಮಾರ್ಗಗಳನ್ನು ಅಧ್ಯಯನ ಮಾಡಿ ರಾಜ್ಯದ ಕೃಷಿ ಸಂಸ್ಕೃತಿ ಮತ್ತು ಬೆಳೆ ಮಾದರಿಗಳಿಗೆ ಅನುಗುಣವಾಗಿ ಕಾರ್ಯರೂಪಕ್ಕೆ ತನ್ನಿ. ಡ್ರೋಣ್, ಎಐ ಮತ್ತಿತರ ಆಧುನಿಕ ತಂತ್ರಜ್ಞಾನವನ್ನು ರೈತರಿಗೆ ತಲುಪಿಸುವ ವ್ಯವಸ್ಥೆ ಮಾಡಿ. ಪ್ರಕೃತಿ ವೈಪರೀತ್ಯಗಳಿಂದ ರೈತರ ಕೃಷಿ ಚಟುವಟಿಕೆಗೆ ತೊಂದರೆ ಆಗದಂತೆ ಕ್ರಮ ವಹಿಸಿ.ತಾಲೂಕು ಮತ್ತು ಹೋಬಳಿ



ಮಟ್ಟದಲ್ಲಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಿ. ಪ್ರಾಥಮಿಕ ಕೃಷಿ ಜತೆ ಸೆಕೆಂಡರಿ ಕೃಷಿ ಸೇರಿದಂತೆ ರೈತರ ಆದಾಯ ಹೆಚ್ಚಿಸಲು ಈಗಾಗಲೇ ಸೂಚಿಸಿರುವ ಕ್ರಮಗಳನ್ನು ಸಮರ್ಪಕವಾಗಿ ಜಾರಿ ಮಾಡಿ ಎಂದು ಅಧಿಕಾರಿಗಳಿಗೆ ಹೇಳಿದರು. ಕೃಷಿ ಇಲಾಖೆ ಅಧೀನದಲ್ಲಿರುವ ಐದು ನಿಗಮ ಮತ್ತು ಮಂಡಳಿಗಳ ಸ್ಥಿತಿಗತಿಯ ಅಧ್ಯಯನ ನಡೆಸಿ ವರದಿ ಸಲ್ಲಿಸಬೇಕು. ರೈತರಿಗೆ ನೀಡಬೇಕಾದ ಪೂರಕ ಮಾಹಿತಿಗಳನ್ನು ವರದಿಯಲ್ಲಿ ಉಲ್ಲೇಖಿಸಬೇಕು. ರಾಜ್ಯದಲ್ಲಿರುವ ಕೋಲ್ಡ್ ಸ್ಟೋರೇಜ್ ಮತ್ತು ಗೋದಾಮುಗಳು ಬಗ್ಗೆ ಪಟ್ಟಿ ನೀಡಬೇಕು. ರೈತರಿಗೆ ಸಬ್ಸಿಡಿ ದರದಲ್ಲಿ ಕೊಟ್ಟಿರುವ ಸವಲತ್ತುಗಳು ಎಷ್ಟು ಪ್ರಯೋಜನಕಾರಿಯಾಗಿವೆ ಎನ್ನುವ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಬ್ಸಿಡಿ ನೀಡಿರುವ ಉದ್ದೇಶ ಜಾರಿ ಆಗುತ್ತಿದೆಯೇ ಎಂಬುದರ ಬಗ್ಗೆ ವರದಿ ನೀಡಬೇಕು ಎಂದ ಅವರು, ಕೇಂದ್ರ ಸರಕಾರ ಪ್ರಾಯೋಜಿತ ಯೋಜನೆಗಳು ಎಷ್ಟರ ಮಟ್ಟಿಗೆ ಜಾರಿ ಆಗುತ್ತಿದೆ ಎನ್ನುವ ಬಗ್ಗೆ ವರದಿ ಸಲ್ಲಿಸಿ. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಸೇರಿದ ಜಾಗಗಳು ಸುರಕ್ಷಿತವಾಗಿರಬೇಕು. ಇದಕ್ಕಾಗಿ ತಡೆಗೋಡೆ ಹಾಕಿಸಿ ಈ ಬಗ್ಗೆ ಕ್ರಮ ಕೈಗೊಳ್ಳಿ ಎಂದು ಶಿವಕುಮಾರ್ ತಿಳಿಸಿದರು. ಸಹಕಾರ ಇಲಾಖೆ ಅಡಿಯಲ್ಲಿ ಯಾವ ಸಂಸ್ಥೆಗಳಿಗೆ ಚುನಾವಣೆ ಆಗಬೇಕಿದೆಯೋ ಎಲ್ಲದಕ್ಕೂ ಚುನಾವಣೆ ನಡೆಸಬೇಕು ಎಂದೂ ಸಭೆಯಲ್ಲಿ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ ನೀಡಿದರು. ಈ ವೇಳೆ ಸರಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಸಿಎಂ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಸಹಕಾರ ಇಲಾಖೆ ಶೆಟ್ಟಣ್ಣನವರ್, ಎಪಿಎಂಸಿ ನಿರ್ದೇಶಕ ಡಾ.ನಲ್ಲಕುಂಟೆ ವೆಂಕಟೇಶಯ್ಯ ಮತ್ತಿತರರು ಭಾಗವಹಿಸಿದ್ದರು. 1,068 ಕೋಟಿ ರೂ., ಮಾವು ಬೆಳೆ ನಾಶ : ಈ ವರ್ಷ 1068 ಕೋಟಿ ಮಾವು ಬೆಳೆ ನಾಶ ಆಗಿದೆ. ಈ ಪೈಕಿ ಶೇ.25ರಷ್ಟು ಅಂದರೆ 229 ಕೋಟಿ ರೂ. ಪರಿಹಾರ ಕೊಡಬೇಕಿದೆ. ರಾಜ್ಯ ಸರಕಾರ 114 ಕೋಟಿ ರೂ., ಹಾಗೂ ಕೇಂದ್ರ ಸರಕಾರ 115 ಕೋಟಿ ರೂ., ನಷ್ಟ ಪರಿಹಾರ ಭರಿಸಬೇಕಿದೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101